ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 148 RNI Number : KNKAN/25/A2770 06-06-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :148 ರಾಯಚೂರು 06-06-2026 ಶನಿವಾರ ಪುಟ 04 ಬೆಲೆ ರೂ.2/- ಮೊ:8660146563

ಲೋಕಸಭೆಯಲ್ಲಿ ಮತ್ತೆ ಡಿಲಿಮಿಟೇಷನ್ ಬಿಲ್ ಮಂಡನೆಗೆ ಸಕಲ ಸಿದ್ಧತೆ



ನವದೆಹಲಿ,ಜೂ.5-

ಲೋಕಸಭೆಯಲ್ಲಿ ಈ ಹಿಂದೆ ತಿರಸ್ಕೃತಗೊಂಡಿದ್ದ ಡಿಲಿಮಿಟೇಷನ್ ಬಿಲ್ ಅನ್ನು ಮತ್ತೆ ಮುಂಗಾರು ಅಧಿವೇಶನದಲ್ಲಿ ಮಂಡಿಸಲು ಕೇಂದ್ರ ಸರ್ಕಾರ ಸಿದ್ಧತೆ ಮಾಡಿಕೊಂಡಿದೆ.ಈ ಬಾರಿ ಮಸೂದೆ ಪಾಸ್ ಮಾಡಿಸಿ ಕೊಳ್ಳಲು ಪ್ರಮುಖ ಪ್ರಾದೇಶಿಕ ಪಕ್ಷಗಳಾದ ಡಿಎಂಕೆ, ಟಿಎಂಸಿ ಮತ್ತಿತರ ಪಕ್ಷಗಳ ಜೊತೆಗೆ ಕೇಂದ್ರ ಸರ್ಕಾರ ಮಾತುಕತೆ ನಡೆಸಿದೆ.

ಟಿಎಂಸಿ ಸಂಸದರು ಸರ್ಕಾರದ ಪ್ರಸ್ತಾಪಕ್ಕೆ ಸಕಾರಾತ್ಮಕ ಪ್ರತಿಕ್ರಿಯೆ ನೀಡಿದ್ದು, ಕ್ಷೇತ್ರ ಪುನರ್ ವಿಂಗಡಣೆ ವಿಷಯದಲ್ಲಿ ಚರ್ಚೆಗೆ ತಯಾರಿದ್ದಾರೆ ಎಂದು ಮೂಲಗಳು ಬಹಿರಂಗ ಪಡಿಸಿವೆ. ಇದೇ ವೇಳೆ, ಬಿಲ್‌ಗೆ ತೀವ್ರ ಆತಂಕ ವ್ಯಕ್ತಪಡಿಸುತ್ತಿದ್ದ ಡಿಎಂಕೆ ಕೂಡ ಈ ಬಾರಿ ವಿರೋಧಿ ನಿಲುವು ತೋರಿಸದೆ, ಸರ್ಕಾರದ ಪರಿಷ್ಕೃತ ಮುದ್ರಣಕ್ಕೆ ಕಾಯುತ್ತಿದೆ ಎಂದು ತಿಳಿದುಬಂದಿದೆ.

ಈ ಹಿಂದೆ ಏಪ್ರಿಲ್ 16 ರಿಂದ 18ರವರೆಗೆ ನಡೆದ ವಿಶೇಷ ಅಧಿವೇಶನದಲ್ಲಿ ಮಹಿಳಾ ಮೀಸಲಾತಿ ಕಾನೂನು ನಾರಿ ಶಕ್ತಿ ವಂದನ ಅಧಿನಿಯಮ ಅನ್ನು 2029ರೊಳಗೆ ಜಾರಿಗೆ ತರುವ ಗುರಿಯೊಂದಿಗೆ ಬಿಲ್ ಮಂಡಿಸಲಾಗಿತ್ತು. ಇದರಲ್ಲಿ ಡಿಲಿಮಿಟೇಷನ್ ಅಂದರೆ ಜನಸಂಖ್ಯೆ ಬದಲಾವಣೆಗೆ ಅನುಗುಣವಾಗಿ ಮತಕ್ಷೇತ್ರಗಳ ಮರುರಚನೆಯನ್ನು ಹೊಸ ಜನಗಣತಿ ಇಲ್ಲದೆಯೇ ಕೈಗೊಳ್ಳುವ ಪ್ರಸ್ತಾಪವೂ ಇತ್ತು. ಆದರೆ ಬಿಲ್ ಅಗತ್ಯ ಬಹುಮತ ಪಡೆಯಲು ವಿಫಲವಾಗಿತ್ತು.

ರಾಜ್ಯಸಭೆ ಚುನಾವಣೆ: ರಾಹುಲ್ ಗಾಂಧಿ ಸಮ್ಮುಖದಲ್ಲಿ ಖರ್ಗೆ ನಾಮಪತ್ರ ಸಲ್ಲಿಕೆ



ಬೆಂಗಳೂರು,ಜೂ.05-

ರಾಜ್ಯಸಭೆ ಚುನಾವಣೆಗೆ ಸ್ಪರ್ಧಿಸಿರುವ ಎಐಸಿಸಿ ಅಧ್ಯಕ್ಷ ಹಾಗು ರಾಜ್ಯಸಭೆ ಪ್ರತಿಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಇಂದು ವಿಧಾನಸೌಧದಲ್ಲಿ ಚುನಾವಣಾಧಿಕಾರಿಗೆ ತಮ್ಮ ನಾಮಪತ್ರ ಸಲ್ಲಿಸಿದರು.

ಮಲ್ಲಿಕಾರ್ಜುನ ಖರ್ಗೆ ನಾಮಪತ್ರ ಸಲ್ಲಿಕೆ ವೇಳೆ ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ, ಸಿಎಂ ಡಿ.ಕೆ.ಶಿವಕುಮಾರ ಮಾಜಿ ಸಿಎಂ ಸಿದ್ದರಾಮಯ್ಯ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್, ಕಾಂಗ್ರೆಸ್ ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ, ಪಕ್ಷದ ಹಿರಿಯ ಮುಖಂಡ ಜಯರಾಂ ರಮೇಶ್ ಸೇರಿದಂತೆ ರಾಜ್ಯದ ಸಚಿವರು ಉಪಸ್ಥಿತರಿದ್ದರು.

ನಾನು ಇವತ್ತು ನಾಮಿನೇಷನ್ ಫೈಲ್ ಮಾಡಿದ್ದೇನೆ. ಎಲ್ಲ ಶಾಸಕರು ೂ ನನಗೆ ಮತ ನೀಡುತ್ತಾರೆ. ಜೂನ್ 18ಕ್ಕೆ ಚುನಾವಣೆ ನಡೆಯಲಿದೆ ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದರು.

ರಾಜ್ಯದಿಂದ ನಾಲ್ಕು ರಾಜ್ಯಸಭೆ ಸ್ಥಾನಗಳು ತೆರವಾಗಲಿವೆ. ಆ ಪೈಕಿ ಕಾಂಗ್ರೆಸ್ ಪಕ್ಷದ ಸಂಖ್ಯಾ ಬಲದಂತೆ 3 ಸ್ಥಾನ ಲಭಿಸಲಿದ್ದು, ಬಿಜೆಪಿಗೆ ಒಂದು ಸ್ಥಾನ ಸಿಗಲಿದೆ.

ರಾಜ್ಯದಿಂದ ಎಐಸಿಸಿ ಮಾಧ್ಯಮ ಮತ್ತು ಪ್ರಚಾರ ವಿಭಾಗದ ಉಸ್ತುವಾರಿ ಪವನ್ ಖೇರಾ ಹಾಗೂ ಮನ್ಸೂ ರ್ ಅಲಿ ಖಾನ್ ಅವರಿಗೆ ಕಾಂಗ್ರೆಸ್ ಟಿಕೆಟ್ ನೀಡಿದೆ.

ಜೂನ್ 18ರಂದು ರಾಜ್ಯಸಭೆ ಚುನಾವಣೆ ನಡೆಯಲಿದೆ. ಜೂನ್ 8 ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ.

ವಿಧಾನಸಭೆ ಸಭಾಂಗಣ ವೀಕ್ಷಿಸಿದ ರಾಹುಲ್ ಗಾಂಧಿ: ಈ ಸಂದರ್ಭದಲ್ಲಿ ರಾಹುಲ್ ಗಾಂಧಿ ವಿಧಾನಸಭೆ ಸಭಾಂಗಣವನ್ನು ವೀಕ್ಷಿಸಿದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸಚಿವ ಯು.ಟಿ.ಖಾದರ್ ಅವರು ಸಭಾಂಗಣವನ್ನು ತೋರಿಸಿದರು.

ಜಿಲ್ಲೆಯಲ್ಲಿ ಶೇ85.90 ರಷ್ಟು ಮತದಾರರ ಮ್ಯಾಪಿಂಗ್ ಪೂರ್ಣ

30ರಿಂದ ಜುಲೈ 29ವರೆಗೆ ಬಿಎಲ್‌ಓ ಗಳಿಂದ ಮನೆ ಮನೆ ಗಣತಿ ಜಿಲ್ಲಾಧಿಕಾರಿ ಪೂವಿತಾ ಎಸ್



ರಾಯಚೂರು ಜೂನ್ 05

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ವಿಶೇಷ ತೀವ್ರ ಪರಿಷ್ಕರಣೆ-2026 (ಎಸ್‌ಐಆರ್)ರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಮತದಾರರ ಪಟ್ಟಿಯನ್ನು ಇನ್ನಷ್ಟು ನಿಖರ, ದೋಷರಹಿತ ಹಾಗೂ ಪಾರದರ್ಶಕಗೊಳಿಸುವ ಉದ್ದೇಶ ಹೊಂದಿದೆ ಎಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಹೇಳಿದರು.

ಜೂನ್ 05ರ ಶುಕ್ರವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯ ಅಂಗವಾಗಿ ಮನೆ ಮನೆ ಸಮೀಕ್ಷೆ ನಡೆಸಲಾಗುವುದು. ಈ ವೇಳೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಓ) ಮನೆಗಳಿಗೆ ಭೇಟಿ ನೀಡಿ ಮತದಾರರ ವಿವರಗಳನ್ನು ಸಂಗ್ರಹಿಸಿ ಪರಿಶೀಲಿಸಲಿದ್ದಾರೆ. ಸಂಗ್ರಹಿಸಲಾದ ಮಾಹಿತಿಯ ಆಧಾರದ ಮೇಲೆ ಮತದಾರರ ಪಟ್ಟಿಯ ಪರಿಷ್ಕರಣೆ, ತಿದ್ದುಪಡಿ ಹಾಗೂ ನವೀಕರಣ ಕಾರ್ಯ ಕೈಗೊಳ್ಳಲಾಗುವುದು ಎಂದು ಹೇಳಿದರು.

ಜಿಲ್ಲೆಯಲ್ಲಿ ಈಗಾಗಲೇ ಶೇ.85.90 ರಷ್ಟು ನೈಜ ಮತದಾರರನ್ನು ಗುರುತಿಸಿ, ಕುಟುಂಬಗಳ ಲಿಂಕೇಜ್‌ನೊದಿಗೆ ಹೊಂದಾಣಿಕೆ ಮಾಡಲಾಗಿದೆ. ವಿಶೇಷ ಪರಿಷ್ಕರಣೆ ಅಂಗವಾಗಿ ಜೂನ್ 20ರಿಂದ 29ರವರೆಗೆ ಪೂರ್ವಸಿದ್ಧತೆ, ತರಬೇತಿ ಮತ್ತು ಮುದ್ರಣ ಕಾರ್ಯಗಳು ನಡೆಯಲಿವೆ. ಜೂನ್ 30ರಿಂದ ಜುಲೈ 29ರವರೆಗೆ ಬಿ.ಎಲ್.ಒ.ಗಳು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ಹಾಗೂ ಪರಿಶೀಲನೆ ನಡೆಸಲಿದ್ದಾರೆ. ತದನಂತರ ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ಈ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಮಾಧ್ಯಮಗಳು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿಗಳು ಕೋರಿದರು.

ತಿನ್ನೇ ಪುಟ.....

ಗಬ್ಬೂರಿಗೆ ಪದವಿ ಕಾಲೇಜು: ಹೋರಾಟಕ್ಕೆ ಫಲ, 40 ಗ್ರಾಮಗಳ ವಿದ್ಯಾರ್ಥಿಗಳಿಗೆ ಹೊಸ ಆಶಾಕಿರಣ



ರಾಯಚೂರು,ಜೂ.5-

ದೇವದುರ್ಗ ತಾಲೂಕಿನ ಗಬ್ಬೂರು ಹೋಬಳಿಗೆ ರಾಜ್ಯ ಸರ್ಕಾರ ಪದವಿ ಕಾಲೇಜು ಮಂಜೂರು ಮಾಡಿರುವುದನ್ನು ಪ್ರಗತಿಪರ ಸಂಘಟನೆಗಳ ಒಕ್ಕೂಟ ಸ್ವಾಗತಿಸಿದ್ದು, ಕಾಲೇಜು ಶೀಘ್ರ ಕಾರ್ಯಾರಂಭಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸರ್ಕಾರವನ್ನು ಆಗ್ರಹಿಸಿದೆ.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ಮುಖಂಡ ರಾಜಪ್ಪ ಸಿರವಾರಕ್ರ, ನದಲ್ಲಿಟ್ಟುಕೊಂಡು 2022-23ನೇ ಸಾಲಿನಿಂದಲೇ ಪ್ರಥಮ ದರ್ಜೆ ಕಾಲೇಜು ಮಂಜೂರಾತಿಗಾಗಿ ನಿರಂತರ ಹೋರಾಟ ನಡೆಸಲಾಗಿತ್ತು ರಾಗಿದ್ದರು. ಕಲ್ಯಾಣ ಕರ್ನಾಟಕದ ಅತ್ಯಂತ ಹಿಂದುಳಿದ ಪ್ರದೇಶಗಳಲ್ಲಿ ಒಂದಾದ ಈ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯವನ್ನು ಗಮ

ತಿನ್ನೇ ಪುಟ.....

ವಿಶಾಖಿಪಟ್ಟಣಂ-ಮೆಹಬೂಬ್ ನಗರ ರೈಲ್ವೆಯನ್ನು ರಾಯಚೂರು ವರೆಗೆ ವಿಸ್ತರಿಸಲು ಡಾ.ಬಾಬುರಾವ್ ಮನವಿ



ರಾಯಚೂರು,ಜೂ.05-

ಪ್ರತಿದಿನ ಸಂಚರಿಸುವ ವಿಶಾಖಿ ಪಟ್ಟಣಂ-ಮೆಹಬೂಬ್ ನಗರ ಎಕ್ಸ ಪ್ರೆಸ್ ರೈಲು(ಸಂಖ್ಯೆ 12861/ 12862 ನ್ನು ರಾಯಚೂರುವರೆಗೆ ವಿಸ್ತರಿಸುವಂತೆ ಸಿಕಂದರ್ ಬಾದ್ ವಿಭಾಗೀಯ ರೈಲ್ವೆ ಪ್ರಬಂಧಕ ಡಾ. ಆರ್. ಗೋಪಾಲಕೃಷ್ಣನ್ ಅವರಿಗೆ ಗುರುವಾರ ರಾಯಚೂರು ರೈಲ್ವೆ ನಿಲ್ದಾಣದಲ್ಲಿ ಮನವಿಯನ್ನು ಸಲ್ಲಿಸಲಾ ಯಿತು.

ಈ ರೈಲು ಮಹೆಬೂಬ್ ನಗರದಲ್ಲಿ 6 ಗಂಟೆ 50 ನಿಮಿಷ ಹಳಿಯ ಮೇಲೆ ನಿಂತುಕೊಂಡಿರುತ್ತದೆ. 17.10.2024ರಂದು ಈ ರೈಲ್ವೆಯನ್ನು ವಿಸ್ತರಿಸುವಂತೆ ಅನುಮೋದನೆಗೊಂಡಿದ್ದರೂ ಈವರೆಗೂ ರೈಲು ರಾಯಚೂರು ವರೆಗೆ ಸಂಚರಿಸುತ್ತಿಲ್ಲ. ರೈಲು ವಿಸ್ತರಣೆಯಿಂದ 3 ಲಕ್ಷ ಜನರಿಗೆ ಅದರಲ್ಲೂ ಯಾದಗಿರಿ ಹಾಗೂ ರಾಯಚೂರು ಜಿಲ್ಲೆ ಜನರಿಗೆ ವಿಶೇಷವಾಗಿ ಪ್ರಯೋಜನ ದೊರೆಯಲಿದೆಯಲ್ಲದೆ ವಿವಿಧ ಪ್ರದೇಶಗಳಿಗೆ ಸಂಪರ್ಕ ಕಲ್ಪಿಸದಂತಾಗುತ್ತದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಇದಲ್ಲದೆ ಅಮೃತ ಭಾರತ ರೈಲ್ವೆ ನಿಲ್ದಾಣ ಯೋಜನೆಯಡಿ ಕಾಮಗಾರಿಗೆ ವೇಗವನ್ನು ಕಲ್ಪಿಸಿ ನೂತನ ನಿಲ್ದಾಣದ ಕಟ್ಟಡವನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಬೇಕು. ರಾಯಚೂರು-ಕಾಚೇಗುಡ್ಡ ರೈಲ್ವೆ(ರೈಲು ಸಂಖ್ಯೆ 67788 ಅಥ

ತಿನ್ನೇ ಪುಟ.....

ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ: ನ್ಯಾ. ಮಾಲಾ ಎನ್.ಡಿ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ವಿಶ್ವ ಪರಿಸರ ದಿನಾಚರಣೆ



ರಾಯಚೂರು,ಜೂ.5-

ಮನುಷ್ಯ ತನ್ನ ಸ್ವಾರ್ಥಕ್ಕಾಗಿ ಮರಗಿಡಗಳನ್ನು ಕಡಿದು ಪರಿಸರವನ್ನು ಹಾಳು ಮಾಡುತ್ತಿರುವುದರಿಂದ ಪ್ರಕೃತಿ ವಿಕೋಪಗಳು ಹೆಚ್ಚುತ್ತಿವೆ. ಪರಿಸರ ಸಂರಕ್ಷಣೆಯ ಬಗ್ಗೆ ಎಲ್ಲರೂ ಎಚ್ಚೆತ್ತುಕೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಇನ್ನಷ್ಟು ಭೀಕರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ರಾಯಚೂರಿನ 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಶ್ರೀಮತಿ ಮಾಲಾ ಎನ್.ಡಿ. ಹೇಳಿದರು.

ನಗರದ ನೂತನ ನ್ಯಾಯಾಲಯ ಕಟ್ಟಡದ ಆವರಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯಾಂಗ ಇಲಾಖೆ, ಜಿಲ್ಲಾಡಳಿತ, ಅರಣ್ಯ ಇಲಾಖೆ ಹಾಗೂ ಜಿಲ್ಲಾ ವಕೀಲರ ಸಂಘದ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಸಸಿಗಳನ್ನು ನೆಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಮುಂದಿನ ಪೀಳಿಗೆಗೆ ಉತ್ತಮ ಪರಿಸರವನ್ನು ನೀಡುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಕೇವಲ ಸಸಿಗಳನ್ನು ನೆಡುವುದರಿಂದ ಕರ್ತವ್ಯ ಮುಗಿಯುವುದಿಲ್ಲ. ಅವುಗಳನ್ನು ಸಂರಕ್ಷಿಸಿ, ಪೋಷಿಸಿ, ಜನ ಹಾಗೂ ಜಾನುವಾರುಗಳಿಂದ ಹಾನಿಯಾಗದಂತೆ ಕಾಪಾಡಬೇಕು ಎಂದು ಅವರು ಹೇಳಿದರು.

2026ರ ವಿಶ್ವ ಪರಿಸರ ದಿನದ ಘೋಷವಾಕ್ಯವಾದ ''ಪ್ರಕೃತಿಯಿಂದ ಪ್ರೇರಿತವಾಗಿದೆ, ಹವಾಮಾನಕ್ಕಾಗಿ, ನಮ್ಮ ಭವಿಷ್ಯಕ್ಕಾಗಿ'' ಎಂಬ ಸಂದೇಶವನ್ನು ಉಲ್ಲೇಖಿಸಿದ ಅವರು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಹಸಿರು ಆವರಣದ ಪ್ರಮಾಣ ಕಡಿಮೆಯಿದ್ದು, ಮಳೆಗಾಲದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಸಸಿಗಳನ್ನು ನೆಡುವ ಮೂಲಕ ಪರಿಸರ ಸಮತೋಲನ ಕಾಪಾಡಬೇಕಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರಾದ ಸಿದ್ದರಾಮಪ್ಪ ಕಲ್ಯಾಣರಾವ್, ರಾಯಚೂರಿನಲ್ಲಿ ವರ್ಷದಿಂದ ವರ್ಷಕ್ಕೆ ತಾಪಮಾನ ಏರಿಕೆಯಾಗುತ್ತಿದ್ದು, ಗಿಡಮರಗಳ ಬೆಳವಣಿಗೆಯ ಮೂಲಕವೇ ಅದನ್ನು ನಿಯಂತ್ರಿಸಲು ಸಾಧ್ಯ ಎಂದು

ತಿನ್ನೇ ಪುಟ.....

ರಾಯಚೂರಿನಲ್ಲಿ ಭಾರತ ವನಕ್ಕೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ

60 ಸಾವಿರ ಸಸಿಗಳ ನೆಡುವ ಗುರಿ; ಪರಿಸರ ಸಂರಕ್ಷಣೆಗೆ ಐತಿಹಾಸಿಕ ಹೆಜ್ಜೆ



ರಾಯಚೂರು,ಜೂ.5-

ವಿಶ್ವ ಪರಿಸರ ದಿನಾಚರಣೆ 2026ರ ಅಂಗವಾಗಿ ರಾಯಚೂ ರಿನಲ್ಲಿ ಆರಂಭಗೊಂಡಿರುವ ಅಭಾರತ ವನಅ ಯೋಜನೆಗೆ ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಗುರುವಾರ ಚಾಲನೆ ನೀಡಿದರು. ಜಿಲ್ಲಾಡಳಿತ, ಎಸ್‌ಪಿಎಮ್‌ಸಿಐಎಲ್ ಸಂಸ್ಥೆಯ ಸಾಮಾಜಿಕ ಕಳಕಳಿ (ಸಿಎಸ್?ಆರ್) ಸಹಯೋಗದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಸಿಗಳನ್ನು ನೆಡುವ ಮೂಲಕ ಯೋಜನೆಗೆ ಅಧಿಕೃತ ಚಾಲನೆ ನೀಡಿ, ವಿದ್ಯಾರ್ಥಿಗ ಳೊಂದಿಗೆ ಪರಿಸರ ಸಂರಕ್ಷಣೆ ಕುರಿತು ಸಂವಾದ ನಡೆಸಿದರು.

ಅತಾಯಿಯ ಹೆಸರಿನಲ್ಲಿ ಒಂದು ಮರಅ ವಿಶೇಷ ಹಸಿರು ಅಭಿಯಾನದಡಿ ಕೈಗೊಂಡಿರುವ ಈ ಯೋಜನೆಯು ಜಿಲ್ಲೆಯ ಪರಿಸರ ಪುನರುಜ್ಜೀವನದ ಮಹತ್ವಾಕಾಂಕ್ಷಿ ಕಾರ್ಯಕ್ರಮವಾಗಿದ್ದು, ಒಟ್ಟು 60 ಸಾವಿರ ಸ್ಥಳೀಯ ಜಾತಿಯ ಸಸಿಗಳನ್ನು ನೆಡುವ ಗುರಿ ಹೊಂದಿದೆ. ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ 10 ಸಾವಿರ ಹಾಗೂ ರಾಯಚೂರು ಮಹಾನಗರ ಪಾಲಿಕೆಯ ಘನ ತ್ಯಾಜ್ಯ ನಿರ್ವಹಣಾ ಘಟಕದ ಪ್ರದೇಶದಲ್ಲಿ 50 ಸಾವಿರ ಸಸಿಗಳನ್ನು ನೆಡಲಾಗುತ್ತಿದೆ.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪೂವಿತಾ ಎಸ್. ಮಾತನಾಡಿ, ಕೇಂದ್ರ ಹಣಕಾಸು ಸಚಿವೆ ಅವರು ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ಮಹತ್ವಾಕಾಂಕ್ಷಿ ಜಿಲ್ಲಾ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದ್ದು, ಮುಂದಿನ ದಿನಗಳಲ್ಲಿ ರಾಯಚೂರು ಮಹತ್ವಾಕಾಂಕ್ಷಿ ಜಿಲ್ಲೆಗಳ ಪಟ್ಟಿಯಿಂದ ಹೊರಬರುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದರು.

ರಾಯಚೂರು ಜಿಲ್ಲೆಯ ಅರಣ್ಯಾವರಣವು ಒಟ್ಟು ಭೌಗೋಳಿಕ ವಿಸ್ತೀರ್ಣದ ಶೇ.2ಕ್ಕಿಂತಲೂ ಕಡಿಮೆ ಇದೆ. ಅರಣ್ಯ ಕೊರತೆಯಿಂದಾಗಿ ಉಷ್ಣಾಂಶ ಹೆಚ್ಚಳ, ಮಣ್ಣಿನ ಫಲವತ್ತತೆ ಕುಸಿತ, ಭೂಗರ್ಭ ಜಲಮಟ್ಟ ಇಳಿಕೆ, ಜೀವ ವೈವಿಧ್ಯ ನಷ್ಟ ಮತ್ತು ಹವಾಮಾನ ವೈಪರೀತ್ಯದಂತಹ

ತಿನ್ನೇ ಪುಟ.....

ಎನ್.ಎಸ್. ಬೋಸರಾಜು 80ನೇ ಹುಟ್ಟುಹಬ್ಬ: ಬಡ ಶಾಲಾ ಮಕ್ಕಳಿಗೆ ಉಚಿತ ಬ್ಯಾಗ್ ಹಾಗೂ ಶಿಕ್ಷಣ ಕಿಟ್ ವಿತರಣೆ



ರಾಯಚೂರು,ಜೂ.5-

ಹಿರಿಯ ರಾಜಕಾರಣಿ ಹಾಗೂ ಮಾಜಿ ಸಚಿವ ಎನ್.ಎಸ್. ಬೋಸ ರಾಜು ಅವರ 80ನೇ ಹುಟ್ಟುಹಬ್ಬದ ಅಂಗವಾಗಿ ರಾಯಚೂರು ನಗರದ ವಾರ್ಡ್ ನಂ. 35 ವ್ಯಾಪ್ತಿಯ ಶ್ರೀರಾಮನಗರ ಕ್ಯಾಂಪ್, ಕಸ್ಬೆ ಕ್ಯಾಂಪ್ ಹಾಗೂ ಸಿದ್ದನಭಾವಿ ಕ್ಯಾಂಪ್‌ನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳ ಬಡ ವಿದ್ಯಾರ್ಥಿಗಳಿಗೆ ಉಚಿತ ಶಾಲಾ ಬ್ಯಾಗ್‌ಗಳು ಹಾಗೂ ಶಿಕ್ಷಣ ಸಾಮಗ್ರಿಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್‌ಗಳೊಂದಿಗೆ ಸೋಪು, ಟೂತ್‌ಪೇಸ್ಟ್, ಬ್ರಶ್, ಸ್ಕೇಲ್, ಪೆನ್ನು, ಪೆನ್ಸಿ ಲ್‌ಗಳ ಕಿಟ್ ಹಾಗೂ ವಾಟರ್ ಬಾಟಲ್‌ಗಳನ್ನು ನೀಡಲಾಯಿತು. ಬಡ ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾ ಹ ನೀಡುವ ಉದ್ದೇಶದಿಂದ ಈ ಸೇವಾ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಮಹಾನಗರ

ತಿನ್ನೇ ಪುಟ.....

ಪಿಸಿಪಿಎನ್‌ಡಿಟಿ ಕಾಯ್ದೆ: ಮುಂದಿನ 3 ವರ್ಷಗಳ ಅವಧಿಗೆ ‘ಜಿಲ್ಲಾ ಸಲಹಾ ಸಮಿತಿ’ ಪುನರ್ ರಚನೆ- ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು



ಬಳ್ಳಾರಿ,ಜೂ.05-

ಗರ್ಭಪೂರ್ವ ಮತ್ತು ಪ್ರಸವಪೂರ್ವ ಭ್ರೂಣಲಿಂಗ ಪತ್ತೆ ತಂತ್ರ ವಿಧಾನಗಳ (ಲಿಂಗ ಆಯ್ಕೆ ಮತ್ತು ನಿಷೇಧ) ಕಾಯ್ದೆ 1994 ರಡಿ ರಾಜ್ಯ ಸರ್ಕಾರವು ಮುಂದಿನ ಮೂರು ವರ್ಷಗಳ ಅವಧಿಗೆ ‘ಜಿಲ್ಲಾ ಸಲಹಾ ಸಮಿತಿ’ ಯನ್ನು ಪುನರ್ ರಚಿಸಿ ಆದೇಶಿಸಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಕಾನೂನುಬಾಹಿರ ಭ್ರೂಣಲಿಂಗ ಪತ್ತೆ ಕಾರ್ಯಗಳಿಗೆ ಕಡಿವಾಣ ಹಾಕುವುದು, ಸ್ಕ್ಯಾನಿಂಗ್ ಕೇಂದ್ರಗಳ ಮೇಲೆ ನಿಗಾ ಇಡುವುದು ಮತ್ತು ಹೆಣ್ಣು ಭ್ರೂಣ ಹತ್ಯೆ ತಡೆಗಟ್ಟುವ ನಿಟ್ಟಿನಲ್ಲಿ ಈ ಸಮಿತಿಯು ಜಿಲ್ಲಾ ಆರೋಗ್ಯ ಇಲಾಖೆಯೊಂದಿಗೆ ಮಹತ್ವದ ಪಾತ್ರ ವಹಿಸಲಿದೆ ಎಂದು ತಿಳಿಸಿದರು.

ಪಿಸಿ-ಪಿಎನ್‌ಡಿಟಿ ಕಾಯ್ದೆ 1994 ರ ಕಲಂ 17ರ ಉಪಕಲಂ 5 ಮತ್ತು 6 ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಸಮಿತಿಗಳನ್ನು ಪುನರ್ ರಚಿಸಲಾಗಿದೆ. ಹೆಣ್ಣು ಭ್ರೂಣ ಹತ್ಯೆ ತಡೆಗಟ್ಟುವುದು ಮತ್ತು ಲಿಂಗ ಅನುಪಾತದ ಸಮತೋಲನವನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಈ ಸಮಿತಿ ಜಿಲ್ಲಾ ಮಟ್ಟದಲ್ಲಿ ಪ್ರಮುಖ ಪಾತ್ರ ವಹಿಸಲಿದೆ ಎಂದರು.

★ಮೂರು ವರ್ಷಗಳ ಅವಧಿ:★

ಪುನರ್ ರಚನೆಗೊಂಡಿರುವ ಈ ಜಿಲ್ಲಾ ಸಲಹಾ ಸಮಿತಿಯು ಮುಂದಿನ ಮೂರು ವರ್ಷಗಳ ಅವಧಿಗೆ ಅಸ್ತಿತ್ವದಲ್ಲಿರಲಿದೆ. ಜಿಲ್ಲೆಯಲ್ಲಿರುವ ಎಲ್ಲಾ ಸ್ಕ್ಯಾನಿಂಗ್ ಸೆಂಟರ್‌ಗಳು, ಐವಿಎಫ್ ಕ್ಲಿನಿಕ್‌ಗಳು ಮತ್ತು ಆಸ್ಪತ್ರೆಗಳು ಪಿಸಿಪಿಎನ್‌ಡಿಟಿ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿವೆಯೇ ಎಂಬುದನ್ನು ಸಮಿತಿ ಪರಿಶೀಲಿಸಬೇಕು ಎಂದು ತಿಳಿಸಿದರು.

ಕಾನೂನು ಬಾಹಿರವಾಗಿ ಲಿಂಗ ಪತ್ತೆ ಮಾಡುವ ಕೇಂದ್ರಗಳ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲು ಜಿಲ್ಲಾ ಪ್ರಾಧಿಕಾರಕ್ಕೆ ಈ ಸಮಿತಿಯು ಅಗತ್ಯ ಸಲಹೆ ಹಾಗೂ ಮಾರ್ಗದರ್ಶನ ನೀಡಬೇಕು. ಸಮಾಜದಲ್ಲಿ ಹೆಣ್ಣು ಮಕ್ಕಳ ರಕ್ಷಣೆ ಮತ್ತು ಲಿಂಗ ತಾರತಮ್ಯ ನಿವಾರಣೆಯ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳಿಗೆ ಸಮಿತಿ ಉತ್ತೇಜನ ನೀಡಲಿದೆ ಎಂದರು.

ಪಿಸಿಪಿಎನ್‌ಡಿಟಿ ಕಾಯ್ದೆಯ ಸೆಕ್ಷನ್ 17(6) ರ ಅನ್ವಯ ಹಾಗೂ ಸರ್ಕಾರದ ವಿವಿಧ ನಿರ್ದೇಶನಗಳನ್ವಯ ಅಧ್ಯಕ್ಷರು ಹಾಗೂ ಸದಸ್ಯ ಕಾರ್ಯದರ್ಶಿ ಸೇರಿ ಒಟ್ಟು 8 ಸದಸ್ಯರನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ.

★ಜಿಲ್ಲಾ ಸಲಹಾ ಸಮಿತಿಯ ಸದಸ್ಯರ ವಿವರ:★

ಲಿಂಗ ಪತ್ತೆ ನಿಷೇಧ ಕಾಯ್ದೆಯನ್ನು ಜಿಲ್ಲೆಯಲ್ಲಿ ಕಟ್ಟುನಿಟ್ಟಾಗಿ ಜಾರಿಗೊಳಿಸಲು ಮತ್ತು ನಿಗಾ ವಹಿಸಲು ವಿವಿಧ ಕ್ಷೇತ್ರಗಳ ತಜ್ಞರನ್ನು ಒಳಗೊಂಡ ಸಮಿತಿಯನ್ನು ರೂಪಿಸಲಾಗಿದ್ದು, ಸಮಿತಿಯಲ್ಲಿ ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ವೀರೇಂದ್ರ ಕುಮಾರ್ ಕೆ.ಜಿ,. ಸ್ತ್ರೀರೋಗ ತಜ್ಞರಾದ ಡಾ.ಪ್ರಣೀತಾ ಅಜಯ್, ಮಕ್ಕಳ ತಜ್ಞ ಡಾ.ಯೋಗಾನಂದ ರೆಡ್ಡಿ.ವೈ.ಸಿ., ರೇಡಿಯಾಲಜಿಸ್ಟ್ ಡಾ.ಕೃಷ್ಣ ಮೂರ್ತಿ.ಎನ್., ಕಾನೂನು ತಜ್ಞ ಮಂಜುನಾಥ ಪೂಜಾರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು, ಸಮಾಜ ಸೇವಕರಾದ ರಾಧಾ ಕೆ.ಎಸ್., ಎ.ಹೆಚ್.ಅಶೋಕಕುಮಾರ್ ಜೈನ್, ಅಶೋಕ್ ಪಾಟೀಲ್ ಒಳಗೊಂಡಿದ್ದು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ.

★ಜಿಲ್ಲೆಯಲ್ಲಿ 87 ಸ್ಕ್ಯಾನಿಂಗ್ ಕೇಂದ್ರಗಳು ಸಕ್ರಿಯ:★

ಬಳ್ಳಾರಿ ಜಿಲ್ಲಾದ್ಯಂತ ಒಟ್ಟು 152 ನೋಂದಾಯಿತ ಸ್ಕ್ಯಾನಿಂಗ್ ಕೇಂದ್ರಗಳಿದ್ದು, ಅವುಗಳಲ್ಲಿ ಸದ್ಯ 87 ಕೇಂದ್ರಗಳು ಮಾತ್ರ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ. ಉಳಿದ 65 ಕೇಂದ್ರಗಳು ವಿವಿಧ ಕಾರಣಗಳಿಂದಾಗಿ ಸದ್ಯ ಕಾರ್ಯನಿರ್ವಹಿಸುತ್ತಿಲ್ಲ (ನಾನ್-ಫಂಕ್ಷನಲ್) ಎಂದು ಡಿಹೆಚ್‌ಓ ತಿಳಿಸಿದರು.

★ತಾಲ್ಲೂಕುವಾರು ಸ್ಕ್ಯಾನಿಂಗ್ ಕೇಂದ್ರಗಳ ವಿವರ:★

ಬಳ್ಳಾರಿ ತಾಲ್ಲೂಕಿನಲ್ಲಿ ಒಟ್ಟು 116 ನೋಂದಾಯಿತ ಕೇಂದ್ರಗಳನ್ನು ಹೊಂದಿದ್ದು, ಪ್ರಸ್ತುತ 67 ಕೇಂದ್ರಗಳು ಸಕ್ರಿಯವಾಗಿವೆ. 10 ಕೇಂದ್ರಗಳ ಪರವಾನಗಿ ರದ್ದಾಗಿದ್ದು, 5 ಕೇಂದ್ರಗಳು ಸ್ವಯಂಪ್ರೇರಿತವಾಗಿ ಸರೆಂಡರ್ ಆಗಿವೆ. 7 ಕೇಂದ್ರಗಳು ಇತರೆ ಕಾರಣಗಳಿಂದ ಹಾಗೂ 24 ಕೇಂದ್ರಗಳು ಶಾಶ್ವತವಾಗಿ ಮುಚ್ಚಲ್ಪಟ್ಟಿದ್ದು, ಒಟ್ಟು 46 ಕೇಂದ್ರಗಳು ಸದ್ಯ ನಿಷ್ಕ್ರಿಯವಾಗಿವೆ.

ಕಂಪ್ಲಿ ತಾಲ್ಲೂಕಿನಲ್ಲಿ ಒಟ್ಟು 4 ಕೇಂದ್ರಗಳಿದ್ದು, ನಾಲ್ಕೂ ಕೇಂದ್ರಗಳೂ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ. ಕುರುಗೋಡು ತಾಲ್ಲೂಕಿನಲ್ಲಿ ಕೇವಲ 1 ಕೇಂದ್ರವಿದ್ದು, ಅದು ಸಕ್ರಿಯವಾಗಿದೆ. ಸಂಡೂರು ತಾಲ್ಲೂಕಿನಲ್ಲಿ ಒಟ್ಟು 10 ಕೇಂದ್ರಗಳಿದ್ದು, 6 ಕೇಂದ್ರಗಳು ಸಕ್ರಿಯವಾಗಿವೆ ಮತ್ತು 4 ಕೇಂದ್ರಗಳು ನಿಷ್ಕ್ರಿಯಗೊಂಡಿವೆ (ಇದರಲ್ಲಿ 1 ಸರೆಂಡರ್, 1 ಇತರೆ ಕಾರಣ ಮತ್ತು 2 ಶಾಶ್ವತವಾಗಿ ಮುಚ್ಚಲ್ಪಟ್ಟಿವೆ).

ಸಿರುಗುಪ್ಪ ತಾಲ್ಲೂಕಿನಲ್ಲಿ ಒಟ್ಟು 21 ಕೇಂದ್ರಗಳಿದ್ದು, 9 ಕೇಂದ್ರಗಳು ಸಕ್ರಿಯವಾಗಿವೆ. ಉಳಿದ 11 ಕೇಂದ್ರಗಳು ನಿಷ್ಕ್ರಿಯಗೊಂಡಿದ್ದು, ಇದರಲ್ಲಿ 1 ರದ್ದತಿ, 1 ಸರೆಂಡರ್, 3 ಇತರೆ ಕಾರಣ ಹಾಗೂ 6 ಕೇಂದ್ರಗಳು ಶಾಶ್ವತವಾಗಿ ಮುಚ್ಚಲ್ಪಟ್ಟಿವೆ.

★ಸರ್ಕಾರಿ ಹಾಗೂ ಖಾಸಗಿ ಸ್ಕ್ಯಾನಿಂಗ್ ಕೇಂದ್ರಗಳ ವರ್ಗೀಕರಣ:★

ಜಿಲ್ಲೆಯಲ್ಲಿ ಪ್ರಸ್ತುತ ಸಕ್ರಿಯವಾಗಿರುವ 87 ಕೇಂದ್ರಗಳಲ್ಲಿ ಒಟ್ಟಾರೆಯಾಗಿ 9 ಸರ್ಕಾರಿ ಸ್ವಾಮ್ಯದ ಸ್ಕ್ಯಾನಿಂಗ್ ಕೇಂದ್ರಗಳು ಹಾಗೂ 78 ಖಾಸಗಿ ಒಡೆತನದ ಸ್ಕ್ಯಾನಿಂಗ್ ಕೇಂದ್ರಗಳು ಸಾರ್ವಜನಿಕ ಸೇವೆಗೆ ಲಭ್ಯವಿವೆ. ಲಿಂಗ ಪತ್ತೆ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯು ಈ ಕೇಂದ್ರಗಳ ಮೇಲೆ ನಿರಂತರ ನಿಗಾ ವಹಿಸಿದೆ ಎಂದು ಅವರು ಹೇಳಿದರು.

ಎಲ್ಲಾ ಸ್ಕ್ಯಾನಿಂಗ್ ಕೇಂದ್ರಗಳು ಗರ್ಭಿಣಿಯರ ಸಂಪೂರ್ಣ ವಿವರಗಳನ್ನು ಕಡ್ಡಾಯವಾಗಿ ಆನ್‌ಲೈನ್‌ನಲ್ಲಿ ಅಪ್‌ಡೇಟ್ ಮಾಡಬೇಕು. ಸೂಕ್ತ ಗುರುತಿನ ಚೀಟಿ ಇಲ್ಲದೆ ಯಾವುದೇ ಸ್ಕ್ಯಾನಿಂಗ್ ಮಾಡಲು ಅವಕಾಶ ನೀಡಬಾರದು. ಜಿಲ್ಲೆಯಲ್ಲಿ ಯಾವುದೇ ರೀತಿಯ ಕಾನೂನುಬಾಹಿರ ಹೆಣ್ಣು ಭ್ರೂಣ ಹತ್ಯೆ ಪ್ರಕರಣಗಳು ನಡೆಯದಂತೆ ತಡೆಯಲು ತೀವ್ರ ನಿಗಾ ವಹಿಸಲಾಗುತ್ತಿದೆ ಎಂದರು.

ಇದೇ ವೇಳೆ ಸಮಿತಿಯ ಸದಸ್ಯರು ತಮ್ಮ ಸಲಹೆ-ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ವೀರೇಂದ್ರ ಕುಮಾರ್, ಸ್ತ್ರೀರೋಗ ತಜ್ಞರಾದ ಡಾ.ಪ್ರಣೀತಾ ಅಜಯ್, ಮಕ್ಕಳ ತಜ್ಞ ಡಾ.ಯೋಗಾನಂದ ರೆಡ್ಡಿ.ವೈ.ಸಿ., ರೇಡಿಯಾಲಜಿಸ್ಟ್ ಡಾ.ಕೃಷ್ಣ ಮೂರ್ತಿ.ಎನ್., ಕಾನೂನು ತಜ್ಞ ಮಂಜುನಾಥ ಪೂಜಾರ್, ರೆಡ್ ಕ್ರಾಸ್ ಸಂಸ್ಥೆಯ ಸಮಾಜ ಸೇವಕ ಎ.ಹೆಚ್.ಅಶೋಕಕುಮಾರ್ ಜೈನ್, ಪ್ರಭಾರ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಂ, ವಿಷಯ ನಿರ್ವಾಹಕ ಗೋಪಾಲ್ ಕೆ.ಹೆಚ್., ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಪ್ರಕಾಶ್ ಎಸ್.ಕರ್ಜಗಿ, ರೇಣುಕಾ ಜಡಗನ್ನನವರ್, ಆರೋಗ್ಯ ನಿರೀಕ್ಷಣಾಧಿಕಾರಿ ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

ಮತದಾರರ ಪಟ್ಟಿ ಪರಿಷ್ಕರಣೆ: ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿದ ಡಿಸಿ

ಕೊಪ್ಪಳ ಜೂ,05-



ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ ಅವರು ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯದ ಬಗ್ಗೆ ಕೊಪ್ಪಳ ಜಿಲ್ಲೆಯ ಮಾಧ್ಯಮ ಪ್ರತಿನಿಧಿಗಳೊಂದಿಗೆ ಜೂನ್ 04ರಂದು ಸಂವಾದ ನಡೆಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಂವಾದ ನಡೆಸಿದ ಜಿಲ್ಲಾಧಿಕಾರಿಗಳು, ಭಾರತ ಚುನಾವಣಾ ಆಯೋಗವು 14ನೇ ಮೇ 2026ರಂದು ಅಧಿಸೂಚನೆ ಹೊರಡಿಸಿ, ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯಕ್ಕೆ ವೇಳಾಪಟ್ಟಿ ನಿಗದಿಪಡಿಸಿದೆ. ನಮ್ಮ ದೇಶದಲ್ಲಿ 2002ರಲ್ಲಿ ಈ ಹಿಂದೆ ಎಸ್.ಐ.ಆರ್ ಆಗಿತ್ತು. 2025ರ ಮತದಾರರ ಪಟ್ಟಿಯಲ್ಲಿ ಇರುವವರು 2010ರ ಮತದಾರರ ಪಟ್ಟಿಯಲ್ಲಿ ಎಲ್ಲಿದ್ದರು ಎಂದು ಈಗ ಮ್ಯಾಪಿಂಗ್ ಮಾಡಲಾಗುತ್ತಿದೆ.

ಜನಗಣತಿಗೆ ನೇಮಕವಾದ ಅಧಿಕಾರಿಗಳು ಮತ್ತು ಸಿಬ್ಬಂದಿಯು 2002ರ ಮತ್ತು 2025ರ ಈ ಎರಡು ಮತದಾರರ ಪಟ್ಟಿಗಳನ್ನು ಇಟ್ಟುಕೊಂಡು ಮ್ಯಾಪಿಂಗ್ ಕಾರ್ಯ ಮಾಡುತ್ತಿದ್ದಾರೆ. ಜೂನ್ 30 ರಿಂದ ಒಂದು ತಿಂಗಳ ಕಾಲ ಬಿ.ಎಲ್.ಓ ಮನೆಮನೆಗೆ ಭೇಟಿ ಕೊಡುತ್ತಾರೆ. ಮ್ಯಾಪಿಂಗ್ ಮಾಡಿದ ಎಲ್ಲರಿಗೂ ಜನಗಣತಿ ಫಾರ್ಮನ್ನು ಕೊಡಲಾಗುತ್ತದೆ.

ಬಿ.ಎಲ್.ಓ.ಗಳು ಮತದಾರರಿಗೆ ಗೈಡ್ ಮಾಡಿ ಜನಗಣತಿ ಫಾರ್ಮನ್ನು ತುಂಬಿಸುತ್ತಾರೆ. ಗಣತಿ ವೇಳೆಯಲ್ಲಿ, ಮತದಾರರು ನಾನು ಯಾವುದೆ ದೇಶದಲ್ಲಿ ಪೌರತ್ವ ಹೊಂದಿಲ್ಲ, ನನ್ನ ಹೆಸರು ಒಂದೇ ಕಡೆ ಇದ್ದು ಬೇರೆಡೆ ಇಲ್ಲ ಎನ್ನುವಂತಹ ಡಿಕ್ಲೇರೇಷನ್ ನೀಡಬೇಕು ಎನ್ನುವಂತಹ ಮಾರ್ಗಸೂಚಿಗಳನ್ನು ನಿಗದಿಪಡಿಸಲಾಗಿದೆ ಎಂದು ತಿಳಿಸಿದರು.

ಮತದಾರರ ಪಟ್ಟಿ ಪರಿಷ್ಕರಣೆಯ ಈ ಸಂದರ್ಭದಲ್ಲಿ ಹೆಸರು ಸೇರಿಸಲು, ಹೆಸರು ತೆಗೆಯಲು ಮತ್ತು ಹೆಸರನ್ನು ತಿದ್ದುಪಡಿ ಮಾಡಲು ಅವಕಾಶ ಕಲ್ಪಿಸಲಾಗಿದೆ ಎಂದರು.

ತೀರಿಕೊಂಡ ಅಥವಾ ಬೇರೆಡೆ ಸ್ಥಳಾಂತರವಾದ ಅಥವಾ ಡುಪ್ಲಿಕೇಟ್ ಮತದಾರರು ಯಾರು ಎಂಬುದನ್ನು ಪತ್ತೆ ಹಚ್ಚಿ ಮತದಾರ ಪಟ್ಟಿಯನ್ನು ಪರಿಷ್ಕರಿಸಲಾಗುತ್ತದೆ. ಈ ಪರಿಷ್ಕರಣಾ ಕಾರ್ಯದಲ್ಲಿ ರಾಜಕೀಯ ಪಕ್ಷಗಳಿಂದ ನೇಮಕಗೊಂಡ ಬಿ.ಎಲ್.ಎ.ಗಳು ಸಹ ಭಾಗಿಯಾಗುತ್ತಾರೆ ಎಂದರು.

ಕೊಪ್ಪಳ ಜಿಲ್ಲೆಯಲ್ಲಿ 2025ರ ಮತದಾರರ ಪಟ್ಟಿಯಲ್ಲಿ ಒಟ್ಟು 11,92,307 ಮತದಾರರ ಪೈಕಿ ಇದುವರೆಗೆ 11,34,937 ಮತದಾರರಿಗೆ ಈಗಾಗಲೇ ಮ್ಯಾಪಿಂಗ್ ಮಾಡಿದ್ದು, 57,370 ಮತದಾರರಿಗೆ ಮ್ಯಾಪಿಂಗ್ ಕಾರ್ಯ ಬಾಕಿ ಇದೆ ಎಂದು ತಿಳಿಸಿದರು.

ಈ ವೇಳೆ, ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಹಾಗೂ ಮಾಧ್ಯಮ ಪ್ರತಿನಿಧಿಗಳು ಇದ್ದರು.



ಮತದಾರರ ಪಟ್ಟಿ ಪರಿಷ್ಕರಣೆಯ ಗಣತಿದಾರರಿಗೆ ಸಹಕರಿಸಲು ಜಿಲ್ಲಾಧಿಕಾರಿಗಳ ಮನವಿ

ಕೊಪ್ಪಳ,ಜೂ.5-

ಕೊಪ್ಪಳ ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಹಿನ್ನೆಲೆಯಲ್ಲಿ 2026ರ ಜೂನ್ 30 ರಿಂದ ಜುಲೈ 29ರವರೆಗೆ ಮನೆಮನೆಗೆ ಭೇಟಿ ನೀಡಲಿರುವ ಗಣತಿದಾರರಿಗೆ ಅಗತ್ಯ ಮಾಹಿತಿ ನೀಡಿ ಸಹಕಾರ ನೀಡಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ ಅವರು ಕೊಪ್ಪಳ ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯದ ಬಗ್ಗೆ ಕೊಪ್ಪಳ ಜಿಲ್ಲೆಯ ಮಾಧ್ಯಮ ಪ್ರತಿನಿಧಿಗಳೊಂದಿಗೆ ಜೂನ್ 04ರಂದು ನಡೆದ ಸಂವಾದ ಬಳಿಕ ಅವರು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಮತದಾರರ ಪಟ್ಟಿಯಿಂದ ಯಾವುದೇ ಅರ್ಹ ಮತದಾರರು ಬಿಟ್ಟು ಹೋಗಬಾರದು ಎಂಬುದೇ ಈ ಮತದಾರರ ಪಟ್ಟಿ ಪರಿಷ್ಕರಣೆಯ ಪ್ರಮುಖ ಉದ್ದೇಶವಾಗಿದೆ ಎಂಬುದಾಗಿ ಭಾರತ ಚುನಾವಣಾ ಆಯೋಗವು ಸ್ಪಷ್ಟಪಡಿಸಿದೆ ಎಂದು ಜಿಲ್ಲಾಧಿಕಾರಿಗಳು ಸ್ಪಷ್ಟಪಡಿಸಿದರು.

ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯದಲ್ಲಿ ರಾಜಕೀಯ ಪಕ್ಷಗಳಿಂದ ನೇಮಕಗೊಂಡ ಬಿಎಲ್ ಎಗಳು ಸಹ ಭಾಗಿಯಾಗುತ್ತಾರೆ. ಅವರಿಗೂ ಸಹ ಜನತೆ ಸಹಕಾರ ನೀಡಬೇಕು ಎಂದು ಕೋರಿದರು.

ಉದ್ದೇಶ ಪೂರ್ವಕವಾಗಿಯೇ ಮತದಾರರ ಪಟ್ಟಿ ಪರಿಷ್ಕರಣೆ ಮಾಡಲಾಗುತ್ತದೆ ಎಂದು ಯಾರಿಂದಲೂ ದೂರುಗಳು ಬರಬಾರದು ಎಂದು ಈ ಪರಿಷ್ಕರಣಾ ಕಾರ್ಯದಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಂದ ನೇಮಕಗೊಂಡ ಬಿಎಲ್ ಇ ಗಳು ಸಹ ಭಾಗಿಯಾಗಿ ಅವರಿಂದ ಸಲಹೆ ಸೂಚನೆಗೆ ಅವಕಾಶ ಕಲ್ಪಿಸಲಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಜಿಪಂ ಉಪ ಕಾರ್ಯದರ್ಶಿ ಟಿ ಕೃಷ್ಣಮೂರ್ತಿ ಇದ್ದರು.

ಹಿಂಗಾರು ಹಂಗಾಮಿನ ನೋಂದಾಯಿತ ವಿಮಾ ಅರ್ಜಿಗಳ ಮರುಪರಿಶೀಲನೆ: ಅರ್ಹ ಫಲಾನುಭವಿಗಳಿಗೆ ಪರಿಹಾರ

ಕೊಪ್ಪಳ ಜೂ.05-

2025-26ನೇ ಸಾಲಿನ ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯಡಿ ಹಿಂಗಾರು ಹಂಗಾಮಿನಲ್ಲಿ ನೋಂದಣಿಯಾಗಿದ್ದ ಹಸಿಮೆಣಸಿನಕಾಯಿ ಬೆಳೆ ವಿಮಾ ಅರ್ಜಿಗಳನ್ನು ಮರುಪರಿಶೀಲನೆ ನಡೆಸಿ, ಅರ್ಹ ಫಲಾನುಭವಿಗಳಿಗೆ ಮಾತ್ರ ಪರಿಹಾರ ವಿತರಿಸಲು ಜಿಲ್ಲಾಡಳಿತ ಕ್ರಮ ಕೈಗೊಂಡಿದೆ ಎಂದು ಕೊಪ್ಪಳ ತೋಟಗಾರಿಕೆ ಜಂಟಿ ನಿರ್ದೇಶಕ ಕೃಷ್ಣ ಸಿ. ಉಕ್ಕುಂದ ಅವರು ತಿಳಿಸಿದ್ದಾರೆ.

ಈ ಕುರಿತು ಇತ್ತೀಚೆಗೆ (ಮೇ 28ರಂದು) ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿ ಪ್ರಕಾರ 2025-26ನೇ ಸಾಲಿನ ಮರುವಿನ್ಯಾಸಗೊಳಿಸಿದ ಆಧಾರಿತ ಬೆಳೆ ವಿಮಾ ಯೋಜನೆಯಡಿ ಹಿಂಗಾರು ಹಂಗಾಮಿನಲ್ಲಿ ಹಸಿಮೆಣಸಿನಕಾಯಿ ಬೆಳೆ ನೋಂದಣಿಯಾಗಿದ್ದು, ಹಸಿಮೆಣಸಿನಕಾಯಿ ಬೆಳೆ ಕ್ಷೇತ್ರಗಳು ವಾಸ್ತವಿಕ ಬಿತ್ತನೆ ಕ್ಷೇತ್ರಕ್ಕಿಂತ ಹೆಚ್ಚಿರುವುದು ಕಂಡುಬಂದ ಪ್ರಯುಕ್ತ ಪ್ರಾದೇಶಿಕ ವ್ಯವಸ್ಥಾಪಕರು, ಅಗ್ರಿಕಲ್ಚರ್ ಇನ್ಸೂರೆನ್ಸ್ ಕಂಪನಿ ಬೆಂಗಳೂರು ರವರು ನೋಂದಣಿಯಾದ ಎಲ್ಲಾ ಅರ್ಜಿಗಳನ್ನು ಕ್ರಾಪ್ ಹೆಲ್ತ್ ಮಾನಿಟರಿಂಗ್ (ಇಟಟಟ ಏಭಿಚ್ಚುರಿಜ ಖಟ್ಟುಜಿರಿಟ್ಟಿಜ್ಜಜ)ನ್ನು ಎಐಸಿ ಫಾರ್ಮ್ ಆ್ಯಪ್ (ಅಐಇ ಊಟ್ಟಇ ಅಟಟ) ಮೂಲಕ ಶೇ. 100ರಷ್ಟು ಕ್ಷೇತ್ರ ಪರಿಶೀಲನೆ ಕೈಗೊಳ್ಳಲಾಗಿ, ಶೇ. 90.42ರಷ್ಟು ನೋಂದಾಯಿತ ಪ್ರದೇಶಗಳಲ್ಲಿ ಹಸಿಮೆಣಸಿನಕಾಯಿ ಬೆಳೆ ಕಂಡುಬಂದಿಲ್ಲವೆಂದು ವರದಿ ಸಲ್ಲಿಸಿರುತ್ತಾರೆ. ಈ ವರದಿ ಅನುಸಾರ ತೋಟಗಾರಿಕೆ ಇಲಾಖೆಯ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿ ವತಿಯಿಂದ ಬೆಳೆ ಸಮೀಕ್ಷೆ ವರದಿ ಅನುಸಾರ ಬೆಳೆ ದರ್ಶಕ ತಂತ್ರಾಂಶದ ಮುಖಾಂತರ ಎಲ್ಲಾ ಹೋಬಳಿ ಮಟ್ಟದ ಅಧಿಕಾರಿಗಳು ಯಾದೃಚ್ಚಿಕ ಮಾದರಿಯ ಅನುಸಾರ ಬೆಳೆ ನೋಂದಾಯಿಸಿದ ರೈತರ ಜಮೀನುಗಳಲ್ಲಿ ಶೇ.25 ರಂತೆ ಪರಿಶೀಲನೆ ಕೈಗೊಂಡು ಮಾರ್ಗಸೂಚಿ ನಿಯಮಾನುಸಾರ ತಾಲ್ಲೂಕಿನ ಸಂಬಂಧಪಟ್ಟ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ತಾಲೂಕಿನ ಬೆಳೆ ಸಮೀಕ್ಷೆ ಸಮಿತಿಯೊಂದಿಗೆ ಸಭೆ ನಡೆಸಿ, ಜಂಟಿ ಪರಿಶೀಲನಾ ವರದಿಯನ್ನು ದೃಡೀಕರಿಸಿ ಸಲ್ಲಿಸಲು ಸೂಚಿಸಲಾಗಿರುತ್ತದೆ. ಜಂಟಿ ಪರಿಶೀಲನೆಯಲ್ಲಿ ಕೊಪ್ಪಳ ತಾಲೂಕಿನಲ್ಲಿ ನೋಂದಾಯಿತ 582 ಅರ್ಜಿಗಳ ಪೈಕಿ 64 ಸರ್ವೇ ನಂಬರಗಳಲ್ಲಿ ಮಾತ್ರ ಹಸಿಮೆಣಸಿನಕಾಯಿ ಬಿತ್ತನೆಯಾಗಿದ್ದು ಕಂಡು ಬಂದಿರುತ್ತದೆ. ಅದೇ ರೀತಿ ಕನಕಗಿರಿ ತಾಲೂಕಿನಲ್ಲಿ 36 ಅರ್ಜಿಗಳ ಪೈಕಿ 3 ಸರ್ವೇ ನಂಬರಗಳಲ್ಲಿ, ಕುಕನೂರು ತಾಲೂಕಿನಲ್ಲಿ 762 ಅರ್ಜಿಗಳ ಪೈಕಿ 194 ಸರ್ವೇ ನಂಬರಗಳಲ್ಲಿ, ಯಲಬುರ್ಗಾ ತಾಲೂಕಿನಲ್ಲಿ 260 ಅರ್ಜಿಗಳ ಪೈಕಿ 80 ಸರ್ವೇ ನಂಬರಗಳಲ್ಲಿ ಮತ್ತು ಕುಷ್ಟಗಿ ತಾಲೂಕಿನಲ್ಲಿ 646 ಅರ್ಜಿಗಳ ಪೈಕಿ 91 ಸರ್ವೇ ನಂಬರಗಳಲ್ಲಿ ಸೇರಿದಂತೆ ಕೊಪ್ಪಳ ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು ನೋಂದಣಿಯಾದ 2286 ಅರ್ಜಿಗಳ ಪೈಕಿ ಕೇವಲ 432 ಸರ್ವೇ ನಂಬರಗಳಲ್ಲಿ ಮಾತ್ರ, ಹಸಿಮೆಣಸಿನಕಾಯಿ ಬೆಳೆ ಬಿತ್'ನೆಯಾಗಿರ'ುವ'ುದ'ು ಕಂಡುಬಂದಿದೆ.

ಯೂರಿಯ, ಡಿ.ಎ.ಪಿ. ಪರ್ಯಾಯ ಸಂಯುಕ್ತ ರಸಗೊಬ್ಬರಗಳ ಬಳಕೆಗೆ ಜಿಲ್ಲಾಧಿಕಾರಿಗಳ ಸಲಹೆ

ಕೊಪ್ಪಳ ಜೂನ್ 05-

ಯೂರಿಯ ಮತ್ತು ಡಿ.ಎ.ಪಿ. ರಸಗೊಬ್ಬರಕ್ಕೆ ಪರ್ಯಾಯ ಸಂಯುಕ್ತ ರಸಗೊಬ್ಬರಗಳ ಬಳಕೆ ಮಾಡುವಂತೆ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಜಿಲ್ಲೆಯ ರೈತರಲ್ಲಿ ಮನವಿ ಮಾಡಿದರು.

ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜೂನ್ 04ರಂದು ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.



ಪ್ರಧಾನ ಪೋಷಕಾಂಶಗಳು ಮತ್ತು ಲಘು ಪೋಷಕಾಂಶಗಳಿಗೆ ಭೂಮಿಯೇ ಮುಖ್ಯ ಆಧಾರವಾದರೂ, ಮಣ್ಣಿನಿಂದ ಎಲ್ಲಾ ಪೋಷಕಾಂಶಗಳು ಬೆಳೆಗಳಿಗೆ ಬೇಕಾದ ಪ್ರಮಾಣದಲ್ಲಿ ದೊರೆಯದಿರುವ ಕಾರಣ ಬಾಹ್ಯವಾಗಿ ಗೊಬ್ಬರ ನೀಡುವುದು ಅನಿವಾರ್ಯವಾಗಿದೆ. ಈ ಪೋಷಕಾಂಶಗಳನ್ನು ಸಾವಯವ ಕೊಟ್ಟಿಗೆ ಗೊಬ್ಬರ, ಹಸಿರೆಲೆ ಗೊಬ್ಬರ, ಹಿಂಡಿ ಗೊಬ್ಬರ, ಎರೆಹುಳಗೊಬ್ಬರ, ಜೈವಿಕ ಗೊಬ್ಬರ ಮತ್ತು ರಸಗೊಬ್ಬರಗಳಿಂದ ಒದಗಿಸಬೇಕಾಗಿರುತ್ತದೆ. ರಸಗೊಬ್ಬರಗಳಲ್ಲಿ ಪೋಷಕಾಂಶಗಳು ಹೆಚ್ಚಿನ ಪ್ರಮಾಣದಲ್ಲಿ ಮತ್ತು ನೇರವಾಗಿ ದೊರೆಯುವ ರೂಪದಲ್ಲಿದ್ದು ಅವುಗಳ ಬಳಕೆ ಅತ್ಯಗತ್ಯವಾಗಿರುತ್ತದೆ. ಶಿಫಾರಸ್ಸಿ ನಂತೆ ಪ್ರಧಾನ ಪೋಷಕಾಂಶಗಳಾದ ಸಾರಜನಕ, ರಂಜಕ, ಪೊಟ್ಯಾಷ್ ಅಂಶಗಳನ್ನು 4:2:1 ಅನುಪಾತದಲ್ಲಿ ಬಳಸಬೇಕು. ಆದರೆ ಪ್ರಸ್ತುತ ರೈತರು ಬಳಸುವ ರಸಗೊಬ್ಬರಗಳ ಅನುಪಾತವು 5:3:1 ಇರುತ್ತದೆ. ಇದನ್ನು ಸಮತೋಲನಾತ್ಮಕ ರಸಗೊಬ್ಬರಗಳ ಬಳಕೆಯನ್ನು ಉತ್ತೇಜಿಸಲು ಪೊಟ್ಯಾಷ್ ಯುಕ್ತ ರಂಜಕ ಅಥವಾ ಇತರೆ ಸಂಯುಕ್ತ ರಸಗೊಬ್ಬರಗಳನ್ನು ಬಳಕೆ ಮಾಡುವುದು ಅವಶ್ಯಕವಾಗಿರುತ್ತದೆ ಎಂದರು.

ರೈತರು ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಹಾಗೂ ಡಿ.ಎ.ಪಿ.ಯ ಬಳಕೆಗೆ ರೂಢಿತವಾಗಿದ್ದು, ಇವುಗಳಲ್ಲಿ ಸಾರಜನಕ ಮತ್ತು ರಂಜಕ ಅಂಶ ಮಾತ್ರವಿರುತ್ತದೆ. ಆದರೆ, ಬೆಳೆಗಳಿಗೆ ಬರ ಮತ್ತು ರೋಗ ನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯವಾಗಿರುವ ಪೊಟ್ಯಾಷ್ ಲಭ್ಯವಿರುವುದಿಲ್ಲ. ಮಾರುಕಟ್ಟೆಯಲ್ಲಿ ವಿವಿಧ ಶ್ರೇಣಿಯ (ಗ್ರೇಡ್) ಸಾರಜನಕ, ರಂಜಕ ಮತ್ತು ಪೊಟ್ಯಾಷ್ ಯುಕ್ತ ಬಹಳಷ್ಟು ರಸಗೊಬ್ಬರಗಳು ಲಭ್ಯವಿರುತ್ತವೆ. ರೈತರು ರಸಗೊಬ್ಬರವನ್ನು ಕೇವಲ ಒಂದೇ ಸಂಸ್ಥೆಯ ಅಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೆ, ಯೂರಿಯಾ ಮತ್ತು ಡಿ.ಎ.ಪಿ. ರಸಗೊಬ್ಬರಕ್ಕೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರಗಳಾದ 20:20:0:13, 10:26:26, 15:15:15, 12:32:16, 22:22:11, 14:35:14, 17:17:17, 14:28:14, 19:19:19, 20:10:10, ಇತ್ಯಾದಿ ರಸಗೊಬ್ಬರಗಳನ್ನು ಬಳಸಬಹುದಾಗಿದೆ. 20:20:0:13 ಗೊಬ್ಬರದ ಜೊತೆ ಬಿತ್ತುವಾಗ ಪೊಟ್ಯಾಷ್ ಗೊಬ್ಬರವನ್ನು ಬಳಕೆ ಮಾಡಬಹುದು ಎಂದು ಹೇಳಿದರು.

ಈ ವರ್ಷ 2026ರ ಜೂನ್ 2 ರವರೆಗೆ ಜಿಲ್ಲೆಯ ವಾಡಿಕೆ ಮಳೆ 87 ಮಿ.ಮೀ. ಇದ್ದು, ವಾಸ್ತವಿಕವಾಗಿ 112.50 ಮಿ.ಮೀ. ಮಳೆಯಾಗಿದೆ. ಇದರಿಂದ ಜಿಲ್ಲೆಯಲ್ಲಿ ಶೇ.29 ಅಧಿಕ ಮಳೆಯಾಗಿದ್ದು, ಜಿಲ್ಲೆಯ ಎಲ್ಲಾ 7 ತಾಲೂಕುಗಳಲ್ಲಿ ಉತ್ತಮ ಹಸಿ ಮಳೆಯಾಗಿದೆ. ಈ ವರ್ಷ ಜಿಲ್ಲೆಯ ಒಟ್ಟು ಬೆಳೆ ವಿಸ್ತೀರ್ಣ ಗುರಿ 3.49 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ರೈತರು ಈಗಾಗಲೇ ಭೂಮಿ ಸಿದ್ದತಾ ಕಾರ್ಯಗಳನ್ನು ಕೈಗೊಂಡಿದ್ದಾರೆ. ಜಿಲ್ಲೆಯಲ್ಲಿನ ಹೆಚ್ಚಿನ ಮಳೆಯ ಹಿನ್ನೆಲೆ ರೈತರು ಸುಮಾರು 1.22 ಲಕ್ಷ ಹೆಕ್ಟೇರ್ ಮೆಕ್ಕೆ ಜೋಳ, 0.32 ಲಕ್ಷ ಹೆಕ್ಟೇರ್ ಸಜ್ಜೆ, 0.44 ಲಕ್ಷ ಹೆಕ್ಟೇರ್ ಹೆಸರು ಬೆಳೆ ಹಾಗೂ 0.40 ಲಕ್ಷ ಹೆಕ್ಟೇರ್ ತೊಗರಿ ಬಿತ್ತನೆಗೆ ರೈತರು ಮುಂದಾಗಿರುತ್ತಾರೆ ಎಂದರು.

ಪ್ರಸ್ತುತ ಮಧ್ಯಪ್ರಾಚ್ಯದಲ್ಲಿನ ಸಂಘರ್ಷದಿಂದಾಗಿ ರಸಗೊಬ್ಬರಗಳ ಉತ್ಪಾದನೆಗೆ ಬಳಸಲಾಗುವ ಕಚ್ಚಾವಸ್ತುಗಳು ಮತ್ತು ರಸಗೊಬ್ಬರಗಳ ಆಮದಿನ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿದ್ದು, ಇದರಿಂದಾಗಿ, ರಾಜ್ಯದಲ್ಲಿ 2026ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರಸಗೊಬ್ಬರಗಳ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತಿದೆ. ಕೇಂದ್ರ ಸರ್ಕಾರದಿಂದ ಏಪ್ರಿಲ್ ಮತ್ತು ಮೇ-2026ರ ಮಾಹೆಯವರೆಗೆ ರಾಜ್ಯಕ್ಕೆ 2.36 ಲಕ್ಷ ಮೆ.ಟನ್. ಯೂರಿಯಾ ಮತ್ತು 1.61 ಲಕ್ಷ ಮೆ.ಟನ್ ಡಿ.ಎ.ಪಿ ರಸಗೊಬ್ಬರವು ಹಂಚಿಕೆಯಾಗಿರುತ್ತದೆ. ದಿನಾಂಕ: 01.04.2026 ರಿಂದ 20.05.2026 ರವರೆಗೆ ಯೂರಿಯಾ 1.71 ಲಕ್ಷ ಮೆ.ಟನ್ ಮತ್ತು ಡಿ.ಎ.ಪಿ 0.53 ಲಕ್ಷ ಮೆ.ಟನ್ ಸರಬರಾಜಾಗಿದ್ದು, ಯೂರಿಯಾದಲ್ಲಿ 0.65 ಲಕ್ಷ ಮೆ.ಟನ್ ಹಾಗೂ ಡಿ ಎ ಪಿ ಯಲ್ಲಿ 1.08 ಲಕ್ಷ ಮೆ.ಟನ್ ಕೊರತೆಯಾಗಿರುತ್ತದೆ ಎಂದು ತಿಳಿಸಿದರು.

ಜಿಲ್ಲೆಯ ಮುಂಗಾರು ಹಂಗಾಮಿನ ಒಟ್ಟು ರಸಗೊಬ್ಬರ ಬೇಡಿಕೆಯು 1,17,703 ಮೆಟ್ರಿಕ್ ಟನ್ ಆಗಿರುತ್ತದೆ. ಹಂಗಾಮಿನ ಆರಂಭದಲ್ಲಿ 26,440 ಮೆಟ್ರಿಕ್ ಟನ್ ಆರಂಭಿಕ ಶಿಲ್ಕು ಲಭ್ಯವಿದ್ದು, ಇದುವರೆಗೆ 20,112 ಮೆಟ್ರಿಕ್ ಟನ್ ರಸಗೊಬ್ಬರ ಪೂರೈಕೆಯಾಗಿದೆ. ಹೀಗಾಗಿ ಒಟ್ಟು ಲಭ್ಯತೆ 46,551 ಮೆಟ್ರಿಕ್ ಟನ್ ಆಗಿದ್ದು, ಇದರಲ್ಲಿ 16,332 ಮೆಟ್ರಿಕ್ ಟನ್ ರಸಗೊಬ್ಬರ ವಿತರಣೆಗೊಂಡಿರುತ್ತದೆ. ಪ್ರಸ್ತುತ ಜಿಲ್ಲೆಯ ವಿವಿಧ ಮಾರಾಟ ಕೇಂದ್ರಗಳಲ್ಲಿ 30,220 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಲಭ್ಯವಿದೆ ಎಂದರು.

ಏಪ್ರಿಲ್ ಹಾಗೂ ಮೇ ಮಾಹೆಗಳಲ್ಲಿ ಒಟ್ಟು 33,187 ಮೆಟ್ರಿಕ್ ಟನ್ ರಸಗೊಬ್ಬರಗಳ ಬೇಡಿಕೆ ಇದ್ದು, ಇದರ ವಿರುದ್ಧ ಕೇವಲ 20,112 ಮೆಟ್ರಿಕ್ ಟನ್ ರಸಗೊಬ್ಬರ ಮಾತ್ರ ಸರಬರಾಜಾಗಿರುತ್ತದೆ. ಪರಿಣಾಮವಾಗಿ 13,075 ಮೆಟ್ರಿಕ್ ಟನ್ ರಸಗೊಬ್ಬರಗಳ ಸರಬರಾಜಿನಲ್ಲಿ ಕೊರತೆ ಉಂಟಾಗಿರುತ್ತದೆ. ಇದರಲ್ಲಿ ಯೂರಿಯಾ 2,206 ಮೆಟ್ರಿಕ್ ಟನ್, ಡಿ.ಎ.ಪಿ. 4,470 ಮೆಟ್ರಿಕ್ ಟನ್, ಎಂ.ಒ.ಪಿ 1,064 ಮೆಟ್ರಿಕ್ ಟನ್ ಹಾಗೂ ಕಾಂಪ್ಲೆಕ್ಸ್ ರಸಗೊಬ್ಬರಗಳಲ್ಲಿ 5,352 ಮೆಟ್ರಿಕ್ ಟನ್ ಕೊರತೆ ಕಂಡುಬಂದಿರುತ್ತದೆ ಎಂದು ತಿಳಿಸಿದರು.

ಪ್ರಸಕ್ತ ಮಧ್ಯ ಪ್ರಾಚ್ಯದ ಬಿಕ್ಕಟ್ಟಿನಿಂದ ರಸಗೊಬ್ಬರದ ಸರಬರಾಜಿನಲ್ಲಿ ಆಗುತ್ತಿರುವ ವ್ಯತ್ಯಯದ ಬಗ್ಗೆ ವಿವರಿಸಿ ರೈತರಿಗೆ ವಿವೇಚನಾತ್ಮಕ ರಸಗೊಬ್ಬರದ ಬಳಕೆಯ ಬಗ್ಗೆ ಆತಂಕಗೊಂಡು ಅಗತ್ಯತೆಗಿಂತ ಹೆಚ್ಚಿನ ರಸಗೊಬ್ಬರಗಳನ್ನು ಖರೀದಿಸದಂತೆ ಹಾಗೂ ಅಗತ್ಯತೆಗಿಂತ ಹೆಚ್ಚಿನ ಯೂರಿಯಾ, ಡಿ.ಎ.ಪಿ ರಸಗೊಬ್ಬರಗಳನ್ನು ಖರೀದಿಸಿ ಶೇಖರಣೆ ಮಾಡುವುದರ ಮುಖಾಂತರ ಕೃತಕ ಅಭಾವ ಸೃಷ್ಟಿಸಿದಲ್ಲಿ ()-1955ರ ಪ್ರಕಾರ ಸಂಬಂಧಪಟ್ಟವರ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಪೋಸ್ಟರ್ ಬಿಡುಗಡೆ: ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕೃಷಿ ಇಲಾಖೆಯಿಂದ ಸಿದ್ದಪಡಿಸಲಾದ ಯೂರಿಯ ಮತ್ತು ಡಿ.ಎ.ಪಿ. ರಸಗೊಬ್ಬರಕ್ಕೆ ಪರ್ಯಾಯ ಸಂಯುಕ್ತ ರಸಗೊಬ್ಬರಗಳ ಬಳಕೆ ಮತ್ತು ಯೂರಿಯಾ ರಸಗೊಬ್ಬರ ಖರೀದಿಗೆ ಎಫ್‌ಐಡಿ (ಫ್ರೂಟ್ಸ್ ಎಫ್‌ಐಡಿ) ಕಡ್ಡಾಯ ಕುರಿತಾದ ಪೋಸ್ಟರಗಳನ್ನು ಇದೇ ವೇಳೆ ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಜಿಪಂ ಉಪ ಕಾರ್ಯದರ್ಶಿ ಟಿ ಕೃಷ್ಣಮೂರ್ತಿ, ಜಂಟಿ ಕೃಷಿ ನಿರ್ದೇಶಕರಾದ ಜಿ.ಡಿ ಕೃಷ್ಣಮೂರ್ತಿ, ಸೇರಿದಂತೆ ವಿವಿಧ ಇಲಾಖೆಗಳ ಮತ್ತು ಜಿಲ್ಲಾಧಿಕಾರಿಗಳ ಕಚೇರಿಯ ಹಾಗೂ ಕೃಷಿ ಇಲಾಖೆಯ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಪಿಎಂ ಆವಾಸ್ ಯೋಜನೆ (ನಗರ)2.0: ವಸತಿ ರಹಿತರ ಸಮೀಕ್ಷೆ ಅವಧಿ ಜೂನ್ 30 ರವರೆಗೆ ವಿಸ್ತರಣೆ

ಬಳ್ಳಾರಿ,ಜೂ.05-

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಟಿಸರ್ವರಿಗೂ ಸೂರುಟ ಅಭಿಯಾನದಡಿ ಜಾರಿಗೆ ತಂದಿರುವ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ)2.0 ಅಡಿ ನಗರ ಪ್ರದೇಶದ ವಸತಿ ರಹಿತ ಹಾಗೂ ನಿವೇಶನ ರಹಿತ ಫಲಾನುಭವಿಗಳ ಸಮೀಕ್ಷೆ ನಡೆಸುವ ಮತ್ತು ಆನ್?ಲೈನ್ ಪೋರ್ಟಲ್ ?ನಲ್ಲಿ ವಿವರ ದಾಖಲಿಸುವ ಕೊನೆಯ ದಿನಾಂಕವನ್ನು ಜೂ.30 ರವರೆಗೆ ವಿಸ್ತರಿಸಲಾಗಿದೆ.

ಹಲವಾರು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಮೀಕ್ಷೆ ಸಮರ್ಪಕ ’ವಾಗಿ ನಡೆಯದ ಕಾರಣ ಅರ್ಹ ಫಲಾನುಭವಿಗಳು ವಂಚಿತರಾಗಿರುವುದು ನಿಗಮದ ಗಮನಕ್ಕೆ ಬಂದಿದ್ದು, ಈ ಹಿನ್ನೆಲೆಯಲ್ಲಿ ಕಾಲಾವಕಾಶವನ್ನು ವಿಸ್ತರಿಸಿ ಆದೇಶಿಸಲಾಗಿದೆ.

ಮಾರ್ಗಸೂಚಿ ಮತ್ತು ನಿಯಮ: ಪಿಎಂ ಆವಾಸ್ ನಗರ 1.0 ಯೋಜನೆಯ ಸಮೀಕ್ಷೆಯಲ್ಲಿದ್ದು, ಇದುವರೆಗೆ ವಸತಿ ಸೌಲಭ್ಯ ಪಡೆಯದ ಎಲ್ಲಾ ಅರ್ಹ ಫಲಾನುಭವಿಗಳನ್ನು ಕಡ್ಡಾಯವಾಗಿ ಪಿಎಂ ಆವಾಸ್ ನಗರ 2.0 ಸಮೀಕ್ಷೆಯಡಿ ಮರುಸೇರಿಸಬೇಕು.

ಸ್ವಂತ ನಿವೇಶನ ಹೊಂದಿರುವ ಫಲಾನುಭವಿಗಳು ಹಕ್ಕುಪತ್ರ, ಕ್ರಯಪತ್ರ, ದಾನಪತ್ರ, ಉಡುಗೊರೆ ಪತ್ರ ಅಥವಾ ಖಾತಾ ಪತ್ರಗಳನ್ನು ಹೊಂದಿರಬೇಕು. ಸೂಕ್ತ ದಾಖಲೆಗಳಿಲ್ಲದಿದ್ದರೆ ಅವರನ್ನು ಟನಿವೇಶನ ರಹಿತ’ ಎಂದು ಪರಿಗಣಿಸಿ, ಅರ್ಜಿಗಳನ್ನು ವೆರಿಫೈ ಮಾಡದೆ ಬಾಕಿ ಉಳಿಸಿಕೊಳ್ಳಬೇಕು.

ನಿವೇಶನ ವಿತರಿಸಲು ಜಮೀನು ಲಭ್ಯವಿರುವ ಪ್ರಕರಣಗಳಲ್ಲಿ ಮಾತ್ರ ವಿವರಗಳನ್ನು ನಮೂದಿಸಿ ವೆಲಿಡೇಟ್ ಮಾಡಬೇಕು. ಜಮೀನು ಲಭ್ಯ ವಿಲ್ಲದಿದ್ದಲ್ಲಿ ಅಂತಹ ಅರ್ಜಿಗಳನ್ನು ಬಾಕಿ ಇಡಬೇಕು.

ಈ ಹಿಂದೆ ಪಿಎಂ ಆವಾಸ್ ಯೋಜನೆಗೆ ಆಯ್ಕೆಯಾಗಿಯೂ ಮನೆ ನಿರ್ಮಿಸದೆ, ದಿನಾಂಕ 3112 2023 ರ ನಂತರ ಕೇಂದ್ರ ಸರ್ಕಾರದಿಂದ ಮನೆ ರದ್ದುಗೊಂಡಿರುವ ಫಲಾನುಭವಿಗಳು ಅರ್ಜಿ ಸಲ್ಲಿಸಲು ಅನರ್ಹರು. ಕೇಂದ್ರ ಅಥವಾ ರಾಜ್ಯ ಸರ್ಕಾರದ ಯಾವುದೇ ವಸತಿ ಯೋಜನೆಗಳಡಿ ಈಗಾಗಲೇ ಸೌಲಭ್ಯ ಪಡೆದಿರುವ ಕುಟುಂಬಗಳು ಈ ಸಮೀಕ್ಷೆಗೆ ಅನರ್ಹರಾಗಿರುತ್ತಾರೆ.

ಒಂದನೇಯ ಪುಟದಿಂದ

30ರಿಂದ ಜುಲೈ 29ವರೆಗೆ ಬಿಎಲ್‌ಓ ಗಳಿಂದ ಮನೆ ಮನೆ ಗಣತಿ ಜಿಲ್ಲಾಧಿಕಾರಿ

14,78,141 ಮತದಾರ ಗುರುತು: 2025ರ ಜಿಲ್ಲೆಯ ಮತದಾರರ ಪಟ್ಟಿಯ ಪ್ರಕಾರ ಒಟ್ಟು 17,22,279 ಅರ್ಹ ಮತದಾರರಿದ್ದು, ಈ ಪೈಕಿ ಈಗಾಗಲೇ 14,78,141 ಮತದಾರರನ್ನು ಗುರುತಿಸಿ ಶೇ.85.90ರಷ್ಟು ಮ್ಯಾಪಿಂಗ್ ಮಾಡಲಾಗಿದೆ. ಉಳಿದ ಮತದಾರರನ್ನು ಪತ್ತೆ ಮಾಡಲಾಗುತ್ತಿದೆ. ಇದರಲ್ಲಿ ಕೆಲವರು ಮೃತರಾಗಿರಬಹುದು, ಬೇರೆ ಕಡೆಗೆ ಕಾಯಂ ಆಗಿ ವಲಸೆ ಹೋಗಿರಬಹುದು, ಅಥವಾ ಮತಪಟ್ಟಿಯಲ್ಲಿ ಎರಡು ಬಾರಿ ಹೆಸರು ಸೇರ್ಪಡೆಯಾಗಿರಬಹುದು. ಆದರೆ ಯಾರನ್ನೂ ಏಕಾಏಕಿ ಪಟ್ಟಿಯಿಂದ ಕೈಬಿಡಲಾಗುವುದಿಲ್ಲ. ಪತ್ತೆಯಾಗದ ಈ .. ಮತದಾರರಿಗೆ ನೋಟಿಸ್ ನೀಡಿ ಪರಿಶೀಲಿಸಲಾಗುವುದು. ಮೃತ ಪಟ್ಟ ಬಗ್ಗೆ ಅಧಿಕೃತ ಮರಣ ಪ್ರಮಾಣ ಪತ್ರ ಸಿಗುವವರೆಗೂ ಯಾರ ಹೆಸರನ್ನೂ ಪಟ್ಟಿಯಿಂದ ತೆಗೆದುಹಾಕುವುದಿಲ್ಲ. ಮತದಾರರ ಪತ್ತೆಗಾಗಿ ವಿಶೇಷ ಕಾರ್ಯಾಚರಣೆ ನಡೆಸಲಾಗುವುದು ಎಂದರು.

ಮನೆ ಗಣತಿ ಸಹಕಾರಕ್ಕೆ ಕೋರಿಕೆ: ಈಗಾಗಲೇ ಮನೆ ಮನೆ ಸಮೀಕ್ಷೆ ಮುಗಿದಿದ್ದು, ಮುಂದಿನ ಹಂತವಾಗಿ ಪ್ರತಿಯೊಬ್ಬ ಮತದಾರರ ಮನೆ ಬಾಗಿಲಿಗೆ ಬಿಎಲ್‌ಒಗಳ ಮೂಲಕ ಅರ್ಧದಷ್ಟು ಮಾಹಿತಿ ಭರ್ತಿಯಾಗಿರುವ ಗಣತಿ ನಮೂನೆ ತಲುಪಿಸಲಾಗುವುದು. ಇದರಲ್ಲಿ ಮತದಾರರ ಹೆಸರು, ಎಪಿಕ್ ಸಂಖ್ಯೆ, ಸಂಬಧಿಕರ ಹೆಸರು ಹಾಗೂ ವಿಧಾನಸಭಾ ಕ್ಷೇತ್ರದ ವಿವರಗಳು ಇರಲಿವೆ. ಬಿಎಲ್‌ಒಗಳು ಮನೆಗಳಿಗೆ ಕನಿಷ್ಠ ಮೂರು ಬಾರಿ ಭೇಟಿ ನೀಡಿ, ಗಣತಿ ನಮೂನೆಗಳನ್ನು ತಲುಪಿಸಲು ಪ್ರಯತ್ನಿಸಲಿದ್ದಾರೆ. ನಂತರ ವಿವರಗಳು ಸರಿಯಾಗಿವೆಯೇ ಎಂಬುದನ್ನು ಮತದಾರರಿಂದ ದೃಢೀಕರಿಸಿಕೊಂಡು ಸಹಿ ಪಡೆದು ವಾಪಸ್ ತರಲಿದ್ದಾರೆ. ಸಾರ್ವಜನಿಕರು ಗಣತಿ ನಮೂನೆ ಸ್ವೀಕರಿಸಿ, ಪರಿಶೀಲಿಸಿ ಕಡ್ಡಾಯವಾಗಿ ಬಿಎಲ್‌ಒಗಳಿಗೆ ವಾಪಸ್ ನೀಡಬೇಕು. ಇಲ್ಲದಿದ್ದರೆ ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟು ಹೋಗುವ ಸಾಧ್ಯತೆ ಇರುವ ಕಾರಣ ಸಾರ್ವಜನಿಕರು ಈ ಬೃಹತ್ ಕಾರ್ಯಕ್ಕೆ ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಕೋರಿದರು.

ಪ್ರಸ್ತುತ ರಾಯಚೂರು ಜಿಲ್ಲೆಯ 07 ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 1,853 ಮತಗಟ್ಟೆಗಳಿದ್ದು, ಒಟ್ಟು 17,22,279 ಮತದಾರರಿದ್ದು, ಮತದಾರರ ಪಟ್ಟಿ ಪರಿಷ್ಕರಣೆ ಪ್ರಜಾಪ್ರಭುತ್ವದ ಅತ್ಯಂತ ಮಹತ್ವದ ಪ್ರಕ್ರಿಯೆಯಾಗಿದೆ. ಗಣತಿ ನಮೂನೆ ಅರ್ಜಿಯನ್ನು ಸಾರ್ವಜನಿಕರು ಆದಷ್ಟು ಭೇಗನೆ ಭರ್ತಿ ಮಾಡಿ ಕೊಡಬೇಕು. ಮತ್ತು ಇವುಗಳಿಗೆ ಸಂಬಧಿಸಿದ ಯಾವುದೇ ದೂರು ಇದ್ದರೆ 1950 ಸಹಾಯವಾಣಿಗೆ ಸಾರ್ವಜನಿಕರು ಕರೆ ಮಾಡಬಹುದಾಗಿದೆ. ಎಲ್ಲ ಮತದಾರರು, ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಸಾರ್ವಜನಿಕರು ಬಿಎಲ್‌ಒಗಳಿಗೆ ಅಗತ್ಯ ಸಹಕಾರ ನೀಡುವ ಮೂಲಕ ಮತದಾರರ ಪಟ್ಟಿಯನ್ನು ಸಂಪೂರ್ಣ, ನಿಖರ ಮತ್ತು ಪಾರದರ್ಶಕಗೊಳಿಸಲು ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ರಾಯಚೂರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಜಿ.ಸುರೇಶ ಸೇರಿದಂತೆ ಚುನಾವಣಾ ಶಾಖೆಯ ಶಿರಸ್ತೇದಾರ್ ಋಷಿಕೇಶ ಇತರರು ಉಪಸ್ಥಿತರಿದ್ದರು.

ಗಬ್ಬೂರಿಗೆ ಪದವಿ ಕಾಲೇಜು: ಹೋರಾಟಕ್ಕೆ ಫಲ, 40 ಗ್ರಾಮಗಳ ವಿದ್ಯಾರ್ಥಿಗಳಿಗೆ ಹೊಸ ಆಶಾಕಿರಣ

ಎಂದು ತಿಳಿಸಿದರು.

ಧರಣಿ, ಸತ್ಯಾಗ್ರಹ, ಮನವಿ ಪತ್ರಗಳ ಸಲ್ಲಿಕೆ ಹಾಗೂ ಜನಪ್ರತಿನಿ ಧಿಗಳ ಮೂಲಕ ಸರ್ಕಾರದ ಗಮನ ಸೆಳೆದ ಪರಿಣಾಮವಾಗಿ ಸಂಸದರು ಮತ್ತು ದೇವದುರ್ಗ ಕ್ಷೇತ್ರದ ಶಾಸಕರು ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರು. ಅದರ ಫಲವಾಗಿ ಗಬ್ಬೂರಿಗೆ ಪದವಿ ಕಾಲೇಜು ಮಂಜೂರಾಗಿರುವುದು ಈ ಭಾಗದ ಜನರ ದೀರ್ಘಕಾಲದ ಬೇಡಿಕೆಗೆ ದೊರೆತ ಜಯವಾಗಿದೆ ಎಂದು ಹೇಳಿದರು.

ಕಾಲೇಜು ಮಂಜೂರಿಗೆ ಕಾರಣರಾದ ಜನಪ್ರತಿನಿಧಿಗಳು ಹಾಗೂ ರಾಜ್ಯ ಸರ್ಕಾರಕ್ಕೆ ಗಬ್ಬೂರು ಹೋಬಳಿ ಜನತೆ, ವಿದ್ಯಾರ್ಥಿ ಸಮುದಾಯ ಮತ್ತು ಪ್ರಗತಿಪರ ಸಂಘಟನೆಗಳ ಒಕ್ಕೂಟದ ಪರವಾಗಿ ಅಭಿನಂದನೆ ಸಲ್ಲಿಸಿದರು.

ಆದರೆ ಕಾಲೇಜು ಮಂಜೂರಾತಿ ಕೇವಲ ಕಾಗದದಲ್ಲೇ ಉಳಿಯಬಾರದು. ಸಂಬಂಧಿಸಿದ ಇಲಾಖೆಗೆ ತಕ್ಷಣ ನಿರ್ದೇಶನ ನೀಡಿ, ಗಬ್ಬೂರು ಗ್ರಾಮದ ಸೀಮಾ ಸರ್ವೇ ನಂ. 896ರಲ್ಲಿ ಇರುವ 4 ಎಕರೆ ಸರ್ಕಾರಿ ಭೂಮಿಯನ್ನು ಕಾಲೇಜಿಗೆ ಮೀಸಲಿಟ್ಟು, ಶಾಶ್ವತ ಕಟ್ಟಡ ನಿರ್ಮಾಣ ಮತ್ತು ಶೈಕ್ಷಣಿಕ ಚಟುವಟಿಕೆಗಳನ್ನು ಕೂಡಲೇ ಆರಂಭಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಲ್ಲಪ್ಪಗೌಡ ಮಾಲಿಪಾಟೀಲ್, ಬಂದಯ್ಯ ಸ್ವಾಮಿ, ಚನ್ನಪ್ಪಗೌಡ ಕಾತರಕಿ, ಶಾಂತಕುಮಾರ ಹೊನ್ನಟಗಿ, ಮರೆಪ್ಪ ಮಲದಕಲ್, ಮುತ್ತುರಾಜ ಮ್ಯಾತ್ರಿ ಹಾಗೂ ಮಾರ್ಥಾಂಡ ಉಪಸ್ಥಿತರಿದ್ದರು.

ವಿಶಾಖಪಟ್ಟಣಂ-ಮೆಹಬೂಬ್ ನಗರ ರೈಲ್ವೆಯನ್ನು ರಾಯಚೂರು ವರೆಗೆ ವಿಸ್ತರಿಸಲು ಡಾ.ಬಾಬುರಾವ್ ಮನವಿ

ವಾ 17694) ಸಂಚಾರದ ವೇಳೆ ಯನ್ನು ಬದಲಿಸಬೇಕು. ಈ ರೈಲು ಬೆಳಗಿನ ಜಾವ ಹೊರಟು, ಸಾಯಂಕಾಲ ಮರಳುವಂತಾಗ ಬೇಕು. ಇದರಿಂದ ಗ್ರಾಹಕರಿಗೆ ಒಂದೇ ದಿನದಲ್ಲಿ ಹೋಗಿ ಬರುವು ದಕ್ಕೆ ಸಾಧ್ಯವಾಗುವುದಲ್ಲದೆ ತಮ್ಮ ವೈಯಕ್ತಿಕ ಕೆಲಸಗಳಿಗೆ ಅನುಕೂಲ ವಾಗಲಿದೆ. ರಾಯಚೂರು ನಿಲ್ದಾಣ ದಲ್ಲಿ ಇನ್ನೂ 4 ಮತ್ತು 5 ಪ್ಲಾಟಫಾರಂ ಗಳ ನಿರ್ಮಾಣವಾಗಬೇಕು. ರೈಚೂ ರು ನಲ್ಲಿ ಪ್ರಯಾಣಿಕ ರೈಲು ಸೇವೆಯ ಪ್ರಾಥಮಿಕ ನಿರ್ವಹಣೆಗಾಗಿ ಪಿಟ್ಲೈನ್ ಜಾರಿಗೆ ತರಬೇಕೆಂಬ ಬೇಡಿಕೆಯುಳ್ಳ ಮನವಿಯನ್ನು ಡಿಎಂಆರ್ ಗೆ ನೀಡಲಾಯಿತು.

ಈ ಸಂದರ್ಭದಲ್ಲಿ ರೈಲ್ವೆ ಸಲಹಾ ಸಮಿತಿ ಸದಸ್ಯ ಮಾರೆಪ್ಪ, ಮಾಜಿ ಸದಸ್ಯ ಡಾ.ಬಾಬುರಾವ್ ಸೇರಿದಂತೆ ಇತರರು ಇದ್ದರು.

ರಾಯಚೂರಿನಲ್ಲಿ ಭಾರತ ವನಕ್ಕೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ 60 ಸಾವಿರ ಸಸಿಗಳ ನೆಡುವ ಗುರಿ; ಪರಿಸರ ಸಂರಕ್ಷಣೆಗೆ ಐತಿಹಾಸಿಕ ಹೆಜ್ಜೆ

ಸಮಸ್ಯೆಗಳು ತೀವ್ರವಾಗುತ್ತಿವೆ. ಇಂತಹ ಸಂದರ್ಭದಲ್ಲಿ ಆಭಾರತ ವನಆ ಯೋಜನೆಯು ಜಿಲ್ಲೆಯ ಪರಿಸರ ಸಮತೋಲನ ಕಾಪಾಡುವಲ್ಲಿ ಮಹತ್ವದ ಪಾತ್ರ ವಹಿಸಲಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಆಗ್ರೀನ್ ಹೀರೋ ಆಫ್ ಇಂಡಿಯಾಆ ಖ್ಯಾತಿಯರಾಧಾ ಕೃಷ್ಣನ್ ನಾಯರ್, ಹಣಕಾಸು ಸಚಿವಾಲಯದ ಕಾರ್ಯದರ್ಶಿ ಸಂಜಯ ಲೋಹಿಯಾ, ನಬಾರ್ಡ್ ಅಧ್ಯಕ್ಷ ಶಾಜಿ ಕಷ್ಣನ್, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ನಳಿನ್ ಅತುಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ್ ಕಾಂಡು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಭಾರತ ವನ ಯೋಜನೆಗೆ ಚಾಲನೆ , 60 ಸಾವಿರ ಸ್ಥಳೀಯ ಜಾತಿಯ ಸಸಿಗಳ ನೆಡುವ ಗುರಿ, ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ 10 ಸಾವಿರ ಸಸಿಗಳ ನೆಡುವಿಕೆ, ಘನ ತ್ಯಾಜ್ಯ ನಿರ್ವಹಣಾ ಘಟಕ ಪ್ರದೇಶದಲ್ಲಿ 50 ಸಾವಿರ ಸಸಿಗಳ ಬೆಳವಣಿಗೆ, ರಾಯಚೂರಿನ ಅರಣ್ಯಾವರಣ ಹೆಚ್ಚಳಕ್ಕೆ ಮಹತ್ವದ ಹೆಜ್ಜೆ

ಎನ್.ಎಸ್. ಬೋಸರಾಜು 80ನೇ ಹುಟ್ಟುಹಬ್ಬ: ಬಡ ಶಾಲಾ ಮಕ್ಕಳಿಗೆ ಉಚಿತ ಬ್ಯಾಗ್ ಹಾಗೂ ಶಿಕ್ಷಣ ಕಿಟ್ ವಿತರಣೆ

ಪಾಲಿಕೆಯ ಮಾಜಿ ಸದಸ್ಯೆ ಸ್ವಾತಿ ಹರಿಬಾಬು, ತಿಮ್ಮಪ್ಪ ನಾಯಕ, ಸಿಂಡಿಕೇಟ್ ಸದಸ್ಯ ಮಲ್ಲೇಶ ಕೊಲಮಿ, ಪತ್ರಕರ್ತ ಹಾಗೂ ಸಮಾಜಸೇವಕ ಮಾರುತಿ ಬಡಿಗೇರ್ ಸೇರಿದಂತೆ ಸ್ಥಳೀಯ ಮುಖಂಡರು ಭಾಗವಹಿಸಿದ್ದರು.

ಶಾಲೆಗಳ ಮುಖ್ಯೋಪಾಧ್ಯಾಯರಾದ ಲಲಿತ, ಮಹಾಂತೇಶ ಬಿರಾದಾರ, ಸಿದ್ದನಭಾವಿ ಶಾಲೆಯ ಮುಖ್ಯಗುರು ಮಾರುತಿ, ಸಹ ಶಿಕ್ಷಕ ಶ್ರೀಕಾಂತ್, ಕಸ್ಬೆ ಕ್ಯಾಂಪ್ ಶಾಲೆಯ ಮುಖ್ಯಗುರು ಶ್ರೀದೇವಿ, ಶ್ರೀನಿವಾಸ ಕ್ಯಾಂಪ್‌ನ ರಾಮು ಗಾಣಾಧಾಳ, ರಂಗನಗೌಡ ಹಾಗೂ ಮುಖ್ಯ ಅಡುಗೆಯವರಾದ ಶ್ರೀದೇವಿ ಪ್ರಸನ್ನ ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ಸಹಕರಿಸಿದರು.

ಎನ್.ಎಸ್. ಬೋಸರಾಜು ಅವರ ಜನ್ಮದಿನದ ಅಂಗವಾಗಿ ನಡೆದ ಈ ಸಾಮಾಜಿಕ ಸೇವಾ ಕಾರ್ಯಕ್ರಮವು ವಿದ್ಯಾರ್ಥಿಗಳು ಹಾಗೂ ಪಾಲಕರಿಂದ ಮೆಚ್ಚುಗೆಗೆ ಪಾತ್ರವಾಯಿತು. ಶಿಕ್ಷಣದೊಂದಿಗೆ ಸ್ವಚ್ಛತೆ ಮತ್ತು ಆರೋಗ್ಯದ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಅಗತ್ಯ ವಸ್ತುಗಳನ್ನು ವಿತರಿಸಿರುವುದು ವಿಶೇಷವಾಗಿತ್ತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ವಿಶ್ವ ಪರಿಸರ ದಿನಾಚರಣೆ

ಹೇಳಿದರು.

ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ರಾಜ್ಯಾದ್ಯಂತ 5 ಕೋಟಿ ಸಸಿಗಳನ್ನು ನೆಡುವ ಗುರಿ ಹೊಂದಲಾಗಿದ್ದು, ಅದರಲ್ಲಿ 2 ಕೋಟಿ ಸಸಿಗಳನ್ನು ಬೆಂಗಳೂರಿನ ಸುತ್ತಮುತ್ತ ಹಾಗೂ 3 ಕೋಟಿ ಸಸಿಗಳನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನೆಡಲಾಗುವುದು. ಶಾಲೆ, ಕಾಲೇಜು ಸೇರಿದಂತೆ ಸ್ಥಳಾವಕಾಶವಿರುವ ಎಲ್ಲ ಪ್ರದೇಶಗಳಲ್ಲಿ ಸಸಿ ನೆಡುವ ಅಭಿಯಾನ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ, ಪ್ರಾದೇಶಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಸುರೇಶ್ ಬಾಬು, ಕುಟುಂಬ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶ ಶ್ರೀಕಾಂತ್ ಎಸ್.ವಿ., ಪ್ರಧಾನ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶೆ ಬಿ.ಟಿ. ಅನ್ನಪೂರ್ಣೇಶ್ವರಿ, ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶ ಶಂಕರಪ್ಪ ಮಾಲಶೆಟ್ಟಿ, ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶ ಸಾಗರ್ ಗುರುಗೌಡ ಪಾಟೀಲ್, ಸಿವಿಲ್ ನ್ಯಾಯಾಧೀಶ ಚನ್ನಬಸಪ್ಪ ಆರ್. ಕೂಡಿ, ವಲಯ ಅರಣ್ಯಾಧಿಕಾರಿ ರಾಜೇಶ್ ನಾಯಕ ಸೇರಿದಂತೆ ನ್ಯಾಯಾಂಗ, ಅರಣ್ಯ ಹಾಗೂ ವಕೀಲರ ಸಂಘದ ಅಧಿಕಾರಿಗಳು ಉಪಸ್ಥಿತರಿದ್ದರು.

ಪರಿಸರ ಸಂರಕ್ಷಣೆಯ ಸಂದೇಶ ಸಾರಿದ ಈ ಕಾರ್ಯಕ್ರಮದಲ್ಲಿ ಸಸಿ ನೆಡುವ ಮೂಲಕ ಹಸಿರು ಭವಿಷ್ಯದ ಸಂಕಲ್ಪವನ್ನು ಎಲ್ಲರೂ ಕೈಗೊಂಡರು.

ಚೌಂಡಿ ಗ್ರಾಮದಲ್ಲಿ 'ಖೇತ್ ಬಚಾವೋ' ಕೃಷಿ ಜಾಗೃತಿ ಅಭಿಯಾನಕ್ಕೆ ಚಾಲನೆ



ಬೀದರ್, ಜೂ.05-

ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯದ ಮಹತ್ವಾಕಾಂಕ್ಷೆಯ 'ಖೇತ್ ಬಚಾವೋ' (ಕೃಷಿ ಉಳಿಸಿ) ಅಭಿಯಾನದ ಅಂಗವಾಗಿ ಬೀದರ ಜಿಲ್ಲೆಯ ಚೌಂಡಿ ಗ್ರಾಮದಲ್ಲಿ ಪ್ರಗತಿ ಪರ ರೈತ ಮಹಿಳೆ ಶ್ರೀಮತಿ ಪೂಜಾ ಗಂಡ ಸಂತೋಷ ಧೂಮನ್‌ಸುರೆ ಇವರ ತೋಟದಲ್ಲಿ ಕೃಷಿ ಜಾಗೃತಿ ಹಾಗೂ ತಾಂತ್ರಿಕ ಸಲಹಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಐಸಿಎಆರ್-ಅಟಾರಿ (ಐಆಅ್ಕಅಖಅ್ಕಐ) ಬೆಂಗಳೂರು ಇವರ ನಿರ್ದೇಶನದಂತೆ, ಬೀದರ್ ಕೃಷಿ ವಿಜ್ಞಾನ ಕೇಂದ್ರ (ಓ್ಖಓ) ಹಾಗೂ ಕೃಷಿ ಇಲಾಖೆಯ ಜಂಟಿ ಸಹಯೋಗದಲ್ಲಿ ಜೂನ್ 30 ರವರೆಗೆ ಈ ಬೃಹತ್ ಆಂದೋಲನ ನಡೆಯಲಿದೆ ಎಂದು ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಡಾ. ರಾಜಶೇಖರ್ ಬಸನಾಯಕ ಹೇಳಿದರು.

ಮಣ್ಣಿನ ಆರೋಗ್ಯ ರಕ್ಷಣೆಗೆ ಆದ್ಯತೆ ಪ್ರಸ್ತುತ ದಿನಗಳಲ್ಲಿ ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆಯಿಂದಾಗಿ ಮಣ್ಣಿನ ಫಲವತ್ತತೆ ಕ್ಷೀಣಿಸುತ್ತಿದ್ದು, ಇದನ್ನು ತಡೆಗಟ್ಟುವುದು ಈ ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಕೃಷಿ ವಿಜ್ಞಾನ ಕೇಂದ್ರದ ಮಣ್ಣು ವಿಜ್ಞಾನಿ ಡಾ. ಚಂದ್ರಕಾಂತ್ ಅವರು ಮಾತನಾಡಿ, ರೈತರು ಕಡ್ಡಾಯವಾಗಿ ಮಣ್ಣಿನ ಪರೀಕ್ಷೆ ಮಾಡಿಸಿ, ಅದರ ಆಧಾರದ ಮೇಲೆ ಸಮತೋಲಿತ ರಸಗೊಬ್ಬರಗಳನ್ನು ಬಳಸಬೇಕು. ಸಮಗ್ರ ಪೋಷಕಾಂಶ ನಿರ್ವಹಣೆ (ಐಘೆಖ), ಹಸಿರು ಗೊಬ್ಬರ ಹಾಗೂ ಸಾವಯವ-ಜೈವಿಕ ಗೊಬ್ಬರಗಳ ಬಳಕೆಯಿಂದ ಮಾತ್ರ ಮಣ್ಣಿನ ಆರೋಗ್ಯವನ್ನು ದೀರ್ಘಕಾಲ ಕಾಪಾಡಲು ಸಾಧ್ಯ, ಎಂದು ಮಣ್ಣಿನ ಫಲವತ್ತತೆ ಸಂರಕ್ಷಣೆಯ ಕುರಿತು ಸವಿಸ್ತಾರವಾಗಿ ವಿವರಿಸಿದರು.

ಸುಸ್ಥಿರ ಬೆಳೆ ಮತ್ತು ಸಸ್ಯ ಸಂರಕ್ಷಣೆ ಇದೇ ಸಂದರ್ಭದಲ್ಲಿ ಸಸ್ಯ ಸಂರಕ್ಷಣೆ (ಕ್ಷಚ್ಚಿರಿ ಕ್ಚಟರಿಚ್ಟಿರಿಜಿಟ್ನ) ತಜ್ಞರಾದ ಡಾ. ಶಿವಕುಮಾರ್ ಅವರು ಮಾತನಾಡಿ, ಉತ್ಪಾದನಾ ವೆಚ್ಚವನ್ನು ಕಡಿತಗೊಳಿಸಿ ಹೆಚ್ಚಿನ ಇಳುವರಿ ಪಡೆಯಲು ವೈಜ್ಞಾನಿಕ ಕೃಷಿ ಪದ್ಧತಿಗಳು ಅತ್ಯಗತ್ಯ. ರೈತರು ಕೀಟ ಮತ್ತು ರೋಗ ಬಾಧೆಗಳ ನಿಯಂತ್ರಣಕ್ಕೆ ರಾಸಾಯನಿಕಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಿ, ಜೈವಿಕ ಹಾಗೂ ನೈಸರ್ಗಿಕ ಕೃಷಿ ಆಧಾರಿತ ಸಸ್ಯ ಸಂರಕ್ಷಣಾ ಉಪಾಯಗಳನ್ನು ಅಳವಡಿಸಿಕೊಳ್ಳಬೇಕು, ಎಂದು ತಾಂತ್ರಿಕ ಸಲಹೆಗಳನ್ನು ನೀಡಿದರು.

30 ದಿನಗಳ ಕಾಲ ಗ್ರಾಮ ಮಟ್ಟದಲ್ಲಿ ಸಂವಾದದೇಶಾದ್ಯಂತ ಅನುಷ್ಠಾನಗೊಳ್ಳುತ್ತಿರುವ ಈ ಯೋಜನೆಯಡಿ, ಮುಂದಿನ 30 ದಿನಗಳ ಕಾಲ ಬೀದರ್ ಜಿಲ್ಲೆಯಾದ್ಯಂತ ಗ್ರಾಮೀಣ ಭಾಗಗಳಲ್ಲಿ ಸರಣಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಕೃಷಿ ವಿಜ್ಞಾನಿಗಳು ಮತ್ತು ಅಧಿಕಾರಿಗಳ ತಂಡವು ಹಳ್ಳಿಗಳಿಗೆ ನೇರ ಭೇಟಿ ನೀಡಿ ರೈತರೊಂದಿಗೆ ನೇರ ಸಂವಾದ, ತಾಂತ್ರಿಕ ಸಲಹಾ ಶಿಬಿರಗಳು ಹಾಗೂ ಮಾಹಿತಿ ಪ್ರಾತ್ಯಕ್ಷಿಕೆಗಳನ್ನು ನಡೆಸಿಕೊಡಲಿದ್ದಾರೆ.



ವೆಂಕಟಗಿರಿಯಲ್ಲಿ ರಾಷ್ಟ್ರೀಯ ಹಾವು ಕಡಿತ ನಿಯಂತ್ರಣ ಜಾಗೃತಿ ಕಾರ್ಯಕ್ರಮ

ಕೊಪ್ಪಳ ಜೂ.05

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ ಹಾಗೂ ವೆಂಕಟಗಿರಿ ಪ್ರಾಥಮಿಕ ಆರೋಗ್ಯ ಕೇಂದ್ರ ಇವರ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ (ಮೇ 30 ರಂದು) ವೆಂಕಟಗಿರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ರಾಷ್ಟ್ರೀಯ ಹಾವು ಕಡಿತ ನಿಯಂತ್ರಣ ಜಾಗೃತಿ ಕಾರ್ಯಕ್ರಮ ನಡೆಯಿತು.

ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ದೇವಮ್ಮ ಅವರು ಮಾತನಾಡಿ, ಹಾವು ಕಡಿತದಿಂದ ಉಂಟಾಗುವ ಮರಣವನ್ನು ನಿಯಂತ್ರಿಸುವ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಭಾರತ ಹಳ್ಳಿಗಳ ದೇಶ ಶೇ. 70 ಕ್ಕಿಂತಲೂ ಹೆಚ್ಚು ಜನರು ಕೃಷಿಯಲ್ಲಿ ಅವಲಂಬಿತರಾಗಿದ್ದಾರೆ. ಭಾರತದಲ್ಲಿ ಪ್ರಮುಖ 4 ವಿಷಕಾರಿ ಹಾವುಗಳಾದ ನಾಗರಹಾವು, ಕಟ್ಟಾವು, ಕೊಳಕುಮಂಡಲ ಹಾವು ಹಾಗೂ ಗರಗಸ ಮಂಡಲ ಹಾವು ಕಡಿತದಿಂದ ಉಂಟಾಗುವ ಸಾವುಗಳಲ್ಲಿ 90% ಅಧಿಕ ಸಾವುಗಳಿಗೆ ಕಾರಣವಾಗುತ್ತವೆ. ಈ 4 ಹಾವುಗಳ ಬಗ್ಗೆ ಎಚ್ಚರಿಗೆ ವಹಿಸಬೇಕು ನಾಗರಹಾವು ಬಿಟ್ಟು ಉಳಿತ 3 ವಿಷಕಾರಿ ಹಾವುಗಳು ರಾತ್ರಿವೇಳೆ ಹೆಚ್ಚು ಚಟುವಟಿಕೆಯಿಂದಿರುತ್ತವೆ. ಹಾಗಾಗಿ ರಾತ್ರಿವೇಳೆ ಹೊರಗಡೆ ಹೋಗುವಾಗ ಟಾರ್ಚ್ ಬಳಸಬೇಕು. ಮನೆ ಅಂಗಳವನ್ನು ಇಲಿ ಹೆಗ್ಗನಗಳಂತಹ ಹಾವುಗಳು ತಿನ್ನುವ ಜೀವಿಗಳಿಂದ ಮುಕ್ತವಾಗಿಸಬೇಕು. ಮನೆಯಂಗಳ ಅಥವಾ ಹೊಲಗದ್ದೆಗಳಲ್ಲಿ ಸಾಮಾನ್ಯವಾಗಿ ತಿರುಗಾಡುವ ಸ್ಥಳಗಳಲ್ಲಿ ಗಿಡಗಂಟಿಗಳನ್ನು ಕಡಿದು ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದರು.

ಹಾವುಗಳಿರುವ ಸಾಧ್ಯತೆ ಹೆಚ್ಚಿರುವ ಸ್ಥಳಗಳಲ್ಲಿ ಕೆಲಸ ಮಾಡುವಾಗ ಶೂಗಳನ್ನು ಬಳಸುವುದು. ರಾತ್ರಿ ಮನೆಯ ಹೊರಗೆ ಹಾಗೂ ಹೊಲಗದ್ದೆಗಳಲ್ಲಿ ಮಲಗಬೇಕಾದಾಗ ನೆಲದಲ್ಲಿ ಮಲಗದೆ ಎತ್ತರ ಪ್ರದೇಶದ ಮಂಚ ಬಳಸುವುದು ಅಗತ್ಯವಾಗಿದೆ. ನೆಲದಲ್ಲಿ ಮಲಗಲೇ ಬೇಕೆಂದರೆ ಕಡ್ಡಾಯವಾಗಿ ಸೊಳ್ಳೆಪರದೆ ಬಳಸುವುದು ಹಾಗೂ ರೈತರು ಹೊಲದಲ್ಲಿ ದನ-ಕರಗಳಿಗೆ ಮೇವು ಹಾಗೂ ಹಸಿಹುಲ್ಲು ಕಿಳುವಾಗ ಕುಡುಗೋಲು ಬಳಸಬೇಕು. ಒಂದು ವೇಳೆ ಹಾವು ಕಚ್ಚಿದರೆ ತಕ್ಷಣ ಸಮೀಪದ ಸರ್ಕಾರಿ ಆಸ್ಪತ್ರೆಗೆ 40 ನಿಮಿಷದೊಳಗಾಗಿ ಹೋಗಿ ಚಿಕಿತ್ಸೆ ಪಡೆದುಕೊಳ್ಳಬೇಕು. ಹಾವು ಕಡೆದ ವ್ಯಕ್ತಿಯನ್ನು ಸಮಾದಾನ ಪಡಿಸಿ, ಗಾಬರಿ ಪಡಿಸಬೇಡಿ. ಹಾವಿನಿಂದ ನಿಧಾನವಾಗಿ ದೂರ ಸರಿಯಿರಿ. ರಕ್ತಬಂಧಕಪಟ್ಟಿ ಕಟ್ಟಬೇಡಿ. ಹಾವು ಕಡಿತಕ್ಕೊಳಗಾದ ವ್ಯಕ್ತಿಯನ್ನು ಎಡಭಾಗಕ್ಕೆ ಮಲಗಿಸಿ ಕಚ್ಚಿದ ಭಾಗವನ್ನು ಅಲುಗಾಡದಂತೆ ನೋಡಿಕೊಳ್ಳಿ. ಗಾಯವನ್ನು ಕತ್ತರಿಸಬೇಡಿ, ಏನನ್ನು ಹಚ್ಚಬೇಡಿ. ಹಾವು ಕಚ್ಚಿದ ವ್ಯಕ್ತಿಗೆ ಆಸ್ಪತ್ರೆಯಲ್ಲಿಯೇ ಚಿಕಿತ್ಸೆ ಕೊಡಿಸಿ. ನಾಟಿ ಔಷಧ ಅಥವಾ ಅಸುರಕ್ಷಿತ ಚಿಕಿತ್ಸಾ ಪದ್ದತಿಯನ್ನು ಅವಲಂಬಿಸಬೇಡಿ. ಒಟ್ಟಾರೆಯಾಗಿ ಪ್ರತಿಯೊಬ್ಬರೂ ತಮ್ಮ ತಮ್ಮ ಮನೆಯ ಸುತ್ತ-ಮುತ್ತಲಿನ ಪ್ರದೇಶ ಸ್ವಚ್ಛತೆಯಿಂದ ಇಟ್ಟುಕೊಂಡು ಇದರ ಬಗ್ಗೆ ಇತರರಿಗೂ ಮಾಹಿತಿ ನೀಡಿ, ಜಾಗೃತರಾಗಬೇಕೆಂದು ತಿಳಿಸಿದರು.

ಬಳ್ಳಾರಿ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಆರಂಭ: ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ

ಬಳ್ಳಾರಿ,ಜೂ.05-

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಬಳ್ಳಾರಿ ಜಿಲ್ಲಾದ್ಯಂತ 2026ರ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯಾಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ನಗರದ ನೂತನ ಜಿಲ್ಲಾಡಳಿತ ಭವನದ ವಿಸಿ ಹಾಲ್?ನಲ್ಲಿ ಗುರುವಾರ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.



ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬ ಅರ್ಹ ನಾಗರಿಕನೂ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವುದು ಎಷ್ಟು ಮುಖ್ಯವೋ, ಅಷ್ಟೇ ಜವಾಬ್ದಾರಿಯುತವಾಗಿ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳುವುದು ಅಗತ್ಯವಾಗಿದೆ. ಅರ್ಹ ಮತದಾರರು ಯಾರೂ ಪಟ್ಟಿಯಿಂದ ಹೊರಗುಳಿಯದಂತೆ ಮತ್ತು ದೋಷರಹಿತ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಉದ್ದೇಶದಿಂದ ಪ್ರಕ್ರಿಯೆ ನಡೆಯಲಿದೆ ಎಂದು ತಿಳಿಸಿದರು.

★ಮನೆ ಮನೆಗೆ ಖುದ್ದಾಗಿ ಬಿಎಲ್?ಒ ಭೇಟಿ: ವಿಶಿಷ್ಟ ಪ್ರಕ್ರಿಯೆ★

ಜಿಲ್ಲೆಯಲ್ಲಿ 2026ರ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆಯ ಅಂಗವಾಗಿ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್?ಒ) ಪ್ರತಿಯೊಬ್ಬ ಮತದಾರರ ಮನೆ ಮನೆಗೂ ಕಡ್ಡಾಯವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಪ್ರತಿ ವರ್ಷ ಜನವರಿ 1ರಂದು ಮತದಾರರ ಪಟ್ಟಿಯನ್ನು ಪ್ರಕಟಿಸುತ್ತೇವೆ. ತದನಂತರ ಹೆಸರು ಸೇರ್ಪಡೆ (ನಮೂನೆ 6), ಕೈಬಿಡುವುದು (ನಮೂನೆ 7), ಸ್ಥಳಾಂತರ (ನಮೂನೆ ?? ಮತ್ತು ತಿದ್ದುಪಡಿ ಪ್ರಕ್ರಿಯೆಗಳು ನಿರಂತರವಾಗಿ ನಡೆಯುತ್ತವೆ. ಇದು ಸಾಮಾನ್ಯವಾಗಿದ್ದು, ಪ್ರಸಕ್ತ ನಡೆಯುತ್ತಿರುವ ಟವಿಶೇಷ ಸಮಗ್ರ ಪರಿಷ್ಕರಣೆ' (ಫೇಸ್3) ಇದಕ್ಕಿಂತ ಸಂಪೂರ್ಣ ಭಿನ್ನವಾಗಿದೆ ಎಂದು ತಿಳಿಸಿದರು.

ಸಾಮಾನ್ಯ ಪರಿಷ್ಕರಣೆಯಲ್ಲಿ ಮನೆ ಮನೆಗೆ ಹೋಗುವುದಿಲ್ಲ. ಈ ವಿಶೇಷ ಅಭಿಯಾನದಲ್ಲಿ ನಮ್ಮ ಬೂತ್ ಮಟ್ಟದ ಅಧಿಕಾರಿಗಳು 1/1/2025ರ ಮತದಾರರ ಪಟ್ಟಿಯಲ್ಲಿರುವ ಪ್ರತಿಯೊಬ್ಬ ಮತದಾರರ ಮನೆಗೂ ಖುದ್ದಾಗಿ ಭೇಟಿ ನೀಡಿ, ವಿವರಗಳನ್ನು ಪರಿಶೀಲಿಸಿ ದೃಢೀಕರಿಸಲಿದ್ದಾರೆ ಎಂದು ವಿವರಿಸಿದರು.

ಜೂನ್ 30 ರಿಂದ ಜುಲೈ 21ರ ವರೆಗೆ ಬಿಎಲ್?ಒಗಳು ಪ್ರತೀ ಮನೆ ಮನೆಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಂದರ್ಭದಲ್ಲಿ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯಿಂದ ನೀಡಿರುವ ಎರಡು ಪುಟಗಳ ಟಎನ್ಯುಮರೇಷನ್ ಫಾರ್ಮ್‌ಟ (ನೋಂದಣಿ ನಮೂನೆ) ಅನ್ನು ಪ್ರತಿಯೊಬ್ಬ ಮತದಾರರಿಗೂ ತಲುಪಿಸಲಾಗುತ್ತದೆ. ಈ ಬಾರಿ ಇಂಗ್ಲೀಷ್ ಜೊತೆಗೆ ಕನ್ನಡದಲ್ಲೂ ಈ ಫಾರ್ಮ್ ಲಭ್ಯವಿರಲಿದೆ. ಮತದಾರರಿಂದ ಈ ಎರಡು ಫಾರ್ಮ್ಗಳನ್ನು ಭರ್ತಿ ಮಾಡಿಸಿಕೊಂಡು, ಅದರಲ್ಲಿ ಒಂದನ್ನು ಬಿಎಲ್?ಒ ವಾಪಸ್ ಪಡೆದರೆ, ಮತ್ತೊಂದಕ್ಕೆ ಸ್ವೀಕೃತಿ ಸಹಿ ಹಾಕಿ ಮತದಾರರ ಕೈಗೆ ನೀಡಲಿದ್ದಾರೆ. ಹೆಸರು ಬಿಟ್ಟು ಹೋಗಿರುವ ಅಥವಾ ತಪ್ಪುಗಳಾಗಿರುವ ಕುರಿತು ಮತದಾರರು ಆಕ್ಷೇಪಣೆ ಅವಧಿಯಲ್ಲಿ ಈ ಸ್ವೀಕೃತಿ ಪತ್ರದೊಂದಿಗೆ ಕ್ಲೈಮ್ ಮಾಡಬಹುದಾಗಿದೆ. ಬಿಎಲ್?ಒ ಆಪ್ ಮೂಲಕ ಇಆರ್?ಒ (ಮತದಾರರ ನೋಂದಣಾಧಿಕಾರಿ) ಅವರಿಗೆ ವಿವರಗಳನ್ನು ಸಲ್ಲಿಸುವ ಸಂಪೂರ್ಣ ಜವಾಬ್ದಾರಿಯನ್ನು ಬಿಎಲ್?ಒಗಳಿಗೆ ವಹಿಸಲಾಗಿದೆ ಎಂದರು.

ಚುನಾವಣಾ ಆಯೋಗವು ಪ್ರಜಾ ಪ್ರಾತಿನಿಧ್ಯ ಕಾಯ್ದೆ (ಆರ್.ಪಿ.ಆಕ್ಟ್) ಸೆಕ್ಷನ್ 21ರಡಿ ಈ ವಿಶೇಷ ಪರಿಷ್ಕರಣೆಗೆ ಚಾಲನೆ ನೀಡಿದ್ದು, ಕರ್ನಾಟಕದಲ್ಲಿ ಸದ್ಯ 3ನೇ ಹಂತದ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಈ ಬಾರಿಯ ಪರಿಷ್ಕರಣೆಗೆ 1/10/2026 ಅನ್ನು ಅರ್ಹತಾ ದಿನಾಂಕವಾಗಿ ನಿಗದಿಪಡಿಸಲಾಗಿದೆ. ಅಂದರೆ, ಈ ದಿನಾಂಕಕ್ಕೆ 18 ವರ್ಷ ತುಂಬುವ ಪ್ರತಿಯೊಬ್ಬ ನಾಗರಿಕನೂ ಮತದಾರರ ಪಟ್ಟಿಗೆ ಹೆಸರು ಸೇರಿಸಲು ಅರ್ಹನಾಗಿರುತ್ತಾನೆ ಎಂದರು.

★ಪರಿಷ್ಕರಣೆ ವೇಳಾಪಟ್ಟಿ★

ಅಧಿಕಾರಿಗಳ ಅಂತಿಮ ಹಂತದ ತರಬೇತಿ ಮುಕ್ತಾಯ: ಜೂನ್ 20, 2026 ರಿಂದ ಜೂನ್ 29, 2026.

ಬಿಎಲ್?ಒಗಳ ಮನೆ ಮನೆ ಭೇಟಿ ಮತ್ತು ಸಮೀಕ್ಷೆ: ಜೂನ್ 30, 2026 ರಿಂದ ಜುಲೈ 21, 2026.

ಹೆಚ್ಚುವರಿ ಮತಗಟ್ಟೆಗಳ ಮರುಹಂಚಿಕೆ): ಜುಲೈ 29, 2026.

ಪರಿಷ್ಕೃತ ಕರಡು ಮತದಾರರ ಪಟ್ಟಿ ಪ್ರಕಟಣೆ: ಆಗಸ್ಟ್ 5, 2026.

ಹಕ್ಕುಗಳು ಮತ್ತು ಆಕ್ಷೇಪಣೆಗಳ ಸಲ್ಲಿಕೆ ಅವಧಿ: ಆಗಸ್ಟ್ 5, 2026 ರಿಂದ ಸೆಪ್ಟೆಂಬರ್ 4, 2026.

ನೋಟಿಸ್ ಅವಧಿ ಮತ್ತು ಇತ್ಯರ್ಥ: ಆಗಸ್ಟ್ 5, 2026 ರಿಂದ ಅಕ್ಟೋಬರ್ 3, 2026.

ಅಂತಿಮ ಮತದಾರರ ಪಟ್ಟಿ ಅಧಿಕೃತ ಪ್ರಕಟಣೆ: ಅಕ್ಟೋಬರ್ 7, 2026 ಣ

★ದಾಖಲೆಯ ಶೇ 97.68 ರಷ್ಟು ಮ್ಯಾಪಿಂಗ್ ಯಶಸ್ವಿ:★

ಈ ಬಾರಿ ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಅತ್ಯಾಧುನಿಕ ತಂತ್ರಜ್ಞಾನ ಹಾಗೂ ವ್ಯವಸ್ಥಿತ ಮ್ಯಾಪಿಂಗ್ ಪ್ರಕ್ರಿಯೆಯನ್ನು ಅಳವಡಿಸಿಕೊಳ್ಳಲಾಗಿದ್ದು, ಜಿಲ್ಲೆಯಲ್ಲಿ ದಾಖಲೆಯ ಯಶಸ್ಸು ಸಿಕ್ಕಿದೆ. ಕಳೆದ 2002ರ ಮತದಾರರ ಪಟ್ಟಿಯನ್ನು ಇಂದಿನ ಪಟ್ಟಿಯೊಂದಿಗೆ ಹೋಲಿಸಿ ಮ್ಯಾಪಿಂಗ್ ಮಾಡುವ ಮಹತ್ವದ ಕಾರ್ಯವನ್ನು ಚುನಾವಣಾ ವಿಭಾಗ ಹಮ್ಮಿಕೊಂಡಿತ್ತು. ಈ ಪ್ರಕ್ರಿಯೆಯಡಿ ಜಿಲ್ಲೆಯ 2025ರ ಪಟ್ಟಿಯ ಅನ್ವಯ ಇರುವ ಒಟ್ಟು 12,28,958 ಮತದಾರರ ಪೈಕಿ ಬರೋಬ್ಬರಿ 12,00,463 (ಶೇ 97.68 ರಷ್ಟು) ಜನರನ್ನು ಯಶಸ್ವಿಯಾಗಿ ಪತ್ತೆ ಹಚ್ಚಿ, ಅವರ ಕುಟುಂಬದವರೊಅದಿಗೆ ಕೊಂಡಿ ಕಲ್ಪಿಸುವ ಕೆಲಸ ಯಶಸ್ವಿಯಾಗಿದೆ. ಇನ್ನೂ ಮ್ಯಾಪ್ ಆಗದೇ ಉಳಿದಿರುವ 28,495 ಮತದಾರರನ್ನು ಪತ್ತೆ ಹಚ್ಚಲು ಮುಂದಿನ ದಿನಗಳಲ್ಲಿ ವಿಶೇಷ ಕಾರ್ಯಾಚರಣೆ ಹಮ್ಮಿಕೊಳ್ಳಲಾಗುವುದು ಎಂದರು.

★ದಾಖಲೆ ಪತ್ರಗಳ ಕಡ್ಡಾಯವಿಲ್ಲ: ಸರಳ ಪ್ರಕ್ರಿಯೆ★

ಬಿಎಲ್?ಒಗಳು ಸಾರ್ವಜನಿಕರಿಂದ ಭರ್ತಿ ಮಾಡಿದ ಫಾರ್ಮ್ಗಳನ್ನು ಸಂಗ್ರಹಿಸುವಾಗ ಯಾವುದೇ ರೀತಿಯ ಪೂರಕ ದಾಖಲಾತಿಗಳನ್ನು ಕೇಳುವುದಿಲ್ಲ. ಮತದಾರರು ನೀಡುವ ಅರ್ಜಿ ಅಪೂರ್ಣವಾಗಿದ್ದರೂ ಸಹ, ಬಿಎಲ್?ಒಗಳೇ ಅದಕ್ಕೆ ಅಗತ್ಯವಿರುವ ಸಹಾಯವನ್ನು ಸ್ಥಳದಲ್ಲೇ ಮಾಡಲಿದ್ದಾರೆ. ಅರ್ಜಿದಾರರ ಹೆಸರು ಮತ್ತು ಸಹಿ ಇದ್ದರೆ ಸಾಕು, ಅದನ್ನು ಸ್ವೀಕರಿಸಲಾಗುತ್ತದೆ ಎಂದು ಸ್ಪಷ್ಟಪಡಿಸಿದರು.

ಒಂದು ವೇಳೆ ಸಲ್ಲಿಕೆಯಾಗುವ ಅರ್ಜಿಗಳು ಅಪೂರ್ಣವಾಗಿದ್ದಲ್ಲಿ, ಅಂತಹ ಸಾರ್ವಜನಿಕರಿಗೆ ಇಆರ್?ಒ ವತಿಯಿಂದ ನೋಟಿಸ್ ಜಾರಿ ಮಾಡಲಾಗುತ್ತದೆ. ಅಪೂರ್ಣ ಮಾಹಿತಿ ಇರುವವರು ಸೂಕ್ತ ದಾಖಲೆಗಳೊಂದಿಗೆ ಪೂರ್ಣ ಮಾಹಿತಿ ನೀಡಿದ ಬಳಿಕವಷ್ಟೇ ಆಕ್ಷೇಪಣೆ ಹಾಗೂ ಹಕ್ಕುಗಳ ಪ್ರಕ್ರಿಯೆಯಡಿ ಅದನ್ನು ಇತ್ಯರ್ಥಪಡಿಸಲಾಗುವುದು. ಬಿಎಲ್?ಒ ಭೇಟಿ ನೀಡಿದಾಗ ಸಾರ್ವಜನಿಕರ ಮನೆ ಬೀಗ ಹಾಕಿದ್ದರೆ, ಅಧಿಕಾರಿಗಳು ಸಮಾನ ಕಾಲಾವಧಿಯ ಅಂತರದಲ್ಲಿ ಕನಿಷ್ಠ 3 ಬಾರಿ ಆ ಮನೆಗೆ ಕಡ್ಡಾಯವಾಗಿ ಭೇಟಿ ನೀಡಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದರು.

★ಹೆಚ್ಚುವರಿ ಮತಗಟ್ಟೆಗಳ ಸ್ಥಾಪನೆ:★

ಯಾವುದಾದರೂ ಒಂದು ಮತದಾನದ ಭಾಗದಲ್ಲಿ ಮತದಾರರ ಸಂಖ್ಯೆ 1,200 ಕ್ಕಿಂತ ಹೆಚ್ಚಾದರೆ, ಅಲ್ಲಿ ಮತದಾನ ಸುಲಭಗೊಳಿಸಲು ಹೆಚ್ಚುವರಿಯಾಗಿ ಒಂದು 'ಆಕ್ಸಿಲರಿ ಪೋಲಿಂಗ್ ಸ್ಟೇಷನ್' ಸ್ಥಾಪಿಸಲಾಗುವುದು. ಈ ಮತಗಟ್ಟೆಗಳ ಮರುಹಂಚಿಕೆ ಅಥವಾ ರ?ಾಷನಲೈಜೇಶನ್ ಪ್ರಕ್ರಿಯೆಯನ್ನು ಜುಲೈ 29 ರ ಒಳಗಾಗಿ ಪೂರ್ಣಗೊಳಿಸಲಾಗುವುದು ಎಂದರು.

ಚುನಾವಣಾ ಪ್ರಕ್ರಿಯೆಯಲ್ಲಿ ಸಂಪೂರ್ಣ ಪಾರದರ್ಶಕತೆ ಕಾಯ್ದುಕೊಳ್ಳುವುದು ಮುಖ್ಯ ಉದ್ದೇಶ. ಈ ನಿಟ್ಟಿನಲ್ಲಿ ಪ್ರಮುಖ ರಾಜಕೀಯ ಪಕ್ಷಗಳು, ಅವರು ನೇಮಿಸುವ ಬೂತ್ ಮಟ್ಟದ ಏಜೆಂಟರು ಹಾಗೂ ಮಾಧ್ಯಮಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು, ಪ್ರಕ್ರಿಯೆಯ ಪ್ರತಿಯೊಂದು ಹಂತದ ಬಗ್ಗೆಯೂ ವಿಸ್ತೃತ ಮಾಹಿತಿ ನೀಡಲಾಗುವುದು ಎಂದು ತಿಳಿಸಿದರು.

ಮತದಾರರಲ್ಲಿ ಜಾಗೃತಿ ಮೂಡಿಸಲು ಜಿಲ್ಲಾ ಪಂಚಾಯತ್ ಸಿಇಒ ನೇತೃತ್ವದಲ್ಲಿ ವ್ಯಾಪಕ ಸ್ವೀಪ್ ಕಾರ್ಯಕ್ರಮ ಪ್ರಚಾರ ಹಮ್ಮಿಕೊಳ್ಳಲಾಗುವುದು. ಕರಡು ಪಟ್ಟಿ ಪ್ರಕಟವಾದ ನಂತರ ಪಟ್ಟಿಯನ್ನು ಗ್ರಾಮ ಪಂಚಾಯತಿ ಕಚೇರಿಗಳು, ತಾಲೂಕು ಪಂಚೇತಿ ಇಒ ಕಚೇರಿ ಹಾಗೂ ಸ್ಥಳೀಯ ನಗರಾಡಳಿತ ಸಂಸ್ಥೆಗಳ ಮುಖ್ಯಸ್ಥರ ಕಚೇರಿಗಳಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಚುರಪಡಿಸಲಾಗುವುದು ಎಂದರು.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ, ವಿವಿಧ ನಮೂನೆಗಳು ಮತ್ತು ವೇಳಾಪಟ್ಟಿಯ ಹೆಚ್ಚಿನ ವಿವರಗಳಿಗಾಗಿ ಸಾರ್ವಜನಿಕರು ಬಳ್ಳಾರಿ ಜಿಲ್ಲೆಯ ಅಧಿಕೃತ ವೆಬ್?ಸೈಟ್ https://ballari. nic. in/ ಅಥವಾ ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗಳ ವೆಬ್?ಸೈಟ್ https://ceo.karnataka.gov.in/en ಗೆ ಭೇಟಿ ನೀಡಬಹುದಾಗಿದೆ.

ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಜಿಪಂ ಉಪಕಾರ್ಯದರ್ಶಿ ಶಶಿಕಾಂತ್ ಶಿವಪೂರೆ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ಆಹಾರ ನಾಗರಿಕರ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ಕೆ.ಆರ್.ದೇವರಾಜ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಕೆ.ಎಂ.ಸೋಮಸುಅದರ್ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಡಿಕೆಶಿ ಶುರುವಾತಿನ ಸೂಚನೆಗಳು ಆಶಾದಾಯಕ; ನುಡಿದದ್ದನ್ನು ನಡೆಸಿಕೊಡಲಿ



ಸಿಎಂ ಡಿಕೆ ಶಿವಕುಮಾರ್ ಅವರು ಪೊಲೀಸ್ ಅಧಿಕಾರಿಗಳ ಸಭೆ ನಡೆಸಿ ತಾಲ್ಲೂಕು ಮಟ್ಟದಿಂದಲೇ ರೌಡಿಗಳ ನಿಗ್ರಹಕ್ಕೆ ಟಾಸ್ಕ್‌ಫೋರ್ಸ್ ರಚನೆಗೆ ಸೂಚನೆ ನೀಡಿರುವುದು ಕೂಡ ಒಂದು ಆಪ್ಯಾಯ ಅಚ್ಚರಿ. ''ನಿಮ್ಮ ಆತ್ಮಸಾಕ್ಷಿಯ ಪ್ರಕಾರ ಕೆಲಸ ಮಾಡಿ, ಸಿಎಂ ಕಚೇರಿಯಿಂದ ಕರೆ ಬಂದರೂ ಮಣಿಯಬಾರದು. ಹೋಗುವಾಗ ದಾಖಲೆಯ ರಾಶಿ ಇಟ್ಟು ಹೋಗಿ'' ಎಂದು ಹೇಳಿರುವುದು ಭವಿಷ್ಯದಲ್ಲಿ ಸ್ವಚ್ಛ ಆಡಳಿತ ನೀಡುವ ಇಂಗಿತದಂತಿದೆ. ಆಡಿದ ಈ ಮಾತನ್ನು ನಡೆಸಿಕೊಡುವ ಹೊಣೆ ಅಧಿಕಾರಿಗಳ ಮೇಲಷ್ಟೇ ಇಲ್ಲ ಸಿಎಂ ಮೇಲೂ ಇದೆ.

ಚುನಾವಣೆ ಮುಗಿದು ಹೊಸ ಸರ್ಕಾರ ಅಧಿಕಾರಕ್ಕೆ ಬಂದಾಗ ಹೊಸ ಯೋಜನೆಗಳ ಘೋಷಣೆ, ಭರವಸೆಯ ಮಹಾಪೂರ ಹರಿಸುವುದು ಸಹಜ. ಆದರೆ, ಕರ್ನಾಟಕದಲ್ಲಿ ಮೂರು ವರ್ಷದಿಂದ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದಲ್ಲಿ ಮುಖ್ಯಮಂತ್ರಿ ಬದಲಾವಣೆಯಾಗಿ ಸಿದ್ದರಾಮಯ್ಯ ಅವರ ಉತ್ತರಾಧಿಕಾರಿಯಾಗಿ ಡಿ ಕೆ ಶಿವಕುಮಾರ್ ಅಧಿಕಾರ ವಹಿಸಿಕೊಂಡ ತಕ್ಷಣ ಅವರು ನಡೆಸಿದ ಮೊದಲ ಪತ್ರಿಕಾಗೋಷ್ಠಿಯಲ್ಲಿ ಪ್ರಕಟಿಸಿದ ದಿಟ್ಟ ನಿರ್ಧಾರಗಳು ಭರವಸೆ ಮೂಡಿಸಿವೆ. ಪ್ರಮಾಣವಚನ ಸ್ವೀಕರಿಸಿ ನೇರ ವಿಧಾನಸೌಧಕ್ಕೆ ಬಂದು ನಡೆಸಿದ ಸುದ್ದಿಗೋಷ್ಠಿಯಲ್ಲಿ ಅತ್ಯಂತ ಮಹತ್ವದ ಕಾರ್ಯಕ್ರಮವೊಂದನ್ನು ಅವರು ಘೋಷಿಸಿದರು. ಪ್ರತಿ ಗ್ರಾಮ ಪಂಚಾಯ್ತಿಯಲ್ಲಿ ಯುವ ಸಮುದಾಯದ ಸಾಂಸ್ಕೃತಿಕ ಚಟುವಟಿಕೆಗೆಂದೇ ''ಭಾರತ್ ಜೋಡೋ ಯುವಕ ಸಂಘ'' ಸ್ಥಾಪನೆ, ಅದಕ್ಕಾಗಿ ಹತ್ತು ಲಕ್ಷ ರೂಪಾಯಿ ಅನುದಾನ ನೀಡುವ ಭರವಸೆ. ಅತ್ಯಂತ ದೂರಗಾಮಿ ಯೋಜನೆಯಿದು. ಪಕ್ಷವನ್ನು ತಳಮಟ್ಟದಲ್ಲಿ ಸಂಘಟಿಸುವ ದೃಷಿಯಿಂದಲೂ ಮಹತ್ವದ ತೀರ್ಮಾನ. ಗ್ರಾಮ ಹೋಬಳಿ ಮಟ್ಟದಲ್ಲಿ ಸಕ್ರಿಯವಾಗುತ್ತಿರುವ ಆರೆಸ್ಸೆಸ್‌ನ ವಿವಿಧ ಸಂಘಟನೆಗಳು ಯುವ ಸಮೂಹವನ್ನು ಸೆಳೆದು ಕೋಮು ದ್ವೇಷದ ಕಾಲಾಳುಗಳನ್ನಾಗಿಸುತ್ತಿದೆ. ಇಂತಹ ಸಂಕೀರ್ಣ ಸಂದರ್ಭದಲ್ಲಿ ಪರ್ಯಾಯವಾಗಿ, ಕೋಮುವಾದಿ ಸಿದ್ಧಾಂತದ ವಿರುದ್ಧ ಇರುವವರನ್ನು ಒಟ್ಟುಗೂಡಿಸಲು ಮತ್ತು ಜಾತ್ಯತೀತ ಸಾಂಸ್ಕೃತಿಕ ವಾತಾವರಣದ ಮೂಲಕ ಯುವಕರನ್ನು ಕೋಮುವಾದದ ಕಡೆಗೆ ಹೋಗದಂತೆ ತಡೆಯುವ ನಿಟ್ಟಿನಲ್ಲಿಯೂ ಇದೊಂದು ದಿಟ್ಟ ನಿರ್ಧಾರ. ಇಂತಹ ಒಂದು ಯೋಜನೆಯನ್ನು ಕೆಪಿಸಿಸಿ ಅಧ್ಯಕ್ಷರಾಗಿದ್ದೂ ಇಷ್ಟು ವರ್ಷ ಮಾಡದಿರುವುದು ಅಚ್ಚರಿ ಮೂಡಿಸಿದೆ. ವಾಸ್ತವದಲ್ಲಿ ಬ್ರಿಟಿಷರ ವಿರುದ್ಧ ಇಡೀ ದೇಶವನ್ನು ಸಂಘಟಿಸಿದ್ದ ಕಾಂಗ್ರೆಸ್ ಪಕ್ಷ ಇಷ್ಟು ಸುದೀರ್ಘ ಕಾಲ ದೇಶದಲ್ಲಿ ಆಡಳಿತ ನಡೆಸಿದ್ದರೂ ಇಂತಹ ಸಾಂಸ್ಕೃತಿಕ ಸಂಘಟನೆಯ ಮಹತ್ವ ಅರಿತಂತಿರಲಿಲ್ಲ. ಅರಿತಿದ್ದರೂ ಜಾರಿಗೆ ತಂದ ಉದಾಹರಣೆಗಳಿಲ್ಲ.

ಬಿಜೆಪಿ ವಿರುದ್ಧ ಆಕ್ರಮಣಕಾರಿ ರಾಜಕಾರಣದ ಸಾಮರ್ಥ್ಯವುಳ್ಳ ಚಾಣಕ್ಷ ರಾಜಕಾರಣಿ ಡಿ ಕೆ ಶಿವಕುಮಾರ್ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಳ್ಳುತ್ತಿದ್ದಂತೆ ಸುದೀರ್ಘ ಕಾಲ ಅಧಿಕಾರ ಹಿಡಿಯುವ ಯೋಜನೆಯ ನೀಲನಕ್ಷೆಯನ್ನು ಸಿದ್ಧ ಮಾಡಿಟ್ಟುಕೊಂಡಿರುವಂತೆ ಕಾಣುತ್ತಿದೆ. ಮೂರು ವರ್ಷಗಳಿಂದ ಕೇವಲ ಅಧಿಕಾರ ಹಸ್ತಾಂತರದ ಸುತ್ತಲೇ ಗಿರಕಿ ಹೊಡೆಯುತ್ತಲಿದ್ದು ಕಾಂಗ್ರೆಸ್ ಸರ್ಕಾರಕ್ಕೆ ಹೊಸ ಮುಖ್ಯಮಂತ್ರಿ, ಪಕ್ಷಕ್ಕೆ ಹೊಸ ಅಧ್ಯಕ್ಷರ ನೇಮಕ ಕಾರ್ಯಕರ್ತ ಶ್ರೇಣಿಯಲ್ಲಿ ಹೊಸ ಹುಮ್ಮಸ್ಸು ಮೂಡಿಸಿದೆ. 2028ರಲ್ಲಿ ವಿಧಾನಸಭಾ ಚುನಾವಣೆ ನಡೆಯಲಿದೆ. ಅಷ್ಟರಲ್ಲಿ ಆಡಳಿತ ವಿರೋಧಿ ಭಾವನೆಯನ್ನು ಮೆಟ್ಟಿ ನಿಂತು, ಕಾಂಗ್ರೆಸ್ ಪಕ್ಷಕ್ಕೆ ಮತ್ತೊಮ್ಮೆ ಗೆಲುವು ಗಳಿಸಿಕೊಡುವುದೇ ಅಲ್ಲದೆ ಕೋಮುವಾದವನ್ನು ಸೋಲಿಸುವ ದೊಡ್ಡ ಹೊಣೆ ಡಿ ಕೆ ಶಿವಕುಮಾರ್ ಮತ್ತು ಹೊಸ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಮೇಲಿದೆ. ಈ ಹೊಣೆಯ ಗಣನೀಯ ಪಾಲನ್ನು ಕೋಮುವಾದಿ ಶಕ್ತಿಗಳ ವಿರುದ್ಧ ನಿರಂತರ ಎತ್ತರದ ದನಿಯಲ್ಲಿ ಮಾತಾಡಿದ ಸಚಿವ ಪ್ರಿಯಾಂಕ್ ಖರ್ಗೆ ಅವರ ಮೇಲಿದೆ. ಧರ್ಮದ ಆಧಾರದ ಮೇಲೆ ದ್ವೇಷವನ್ನು ಬಿತ್ತಿ ಸಮಾಜವನ್ನು ಒಡೆಯುತ್ತಿರುವ ಶಕ್ತಿಗಳನ್ನು ಮಟ್ಟ ಹಾಕಲೆಂದೇ ಖರ್ಗೆ ಅವರ ಕೈಗೆ ಗೃಹಖಾತೆ ಒಪ್ಪಿಸಿದಂತಿದೆ. ಈ ಕೆಲಸವನ್ನು ಅವರು ಅತ್ಯಂತ ನಿಷ್ಠುರವಾಗಿ ಮಾಡಬಲ್ಲರು. ಕಾನೂನಿನ ಸರಪಳಿಯ ಪರಿವೆಯೇ ಇಲ್ಲದಂತೆ ಮೆರೆಯುತ್ತಿರುವ ಈ ಶಕ್ತಿಗಳ ನಿಗ್ರಹ ಕಾಲದ ಅಗತ್ಯವಾಗಿದೆ.

ಮುಖ್ಯಮಂತ್ರಿಯವರು ಪೊಲೀಸ್ ಅಧಿಕಾರಿಗಳ ಸಭೆ ನಡೆಸಿ ತಾಲ್ಲೂಕು ಮಟ್ಟದಿಂದಲೇ ರೌಡಿಗಳ ನಿಗ್ರಹಕ್ಕೆ ಟಾಸ್ಕ್‌ಫೋರ್ಸ್ ರಚನೆಗೆ ಸೂಚನೆ ನೀಡಿರುವುದು ಕೂಡ ಒಂದು ಆಪ್ಯಾಯ ಅಚ್ಚರಿ. ಮುಖ್ಯಮಂತ್ರಿ ಅಷ್ಟಕ್ಕೇ ನಿಲ್ಲಿಸಿಲ್ಲ. ನಿಮ್ಮ ಆತ್ಮಸಾಕ್ಷಿಯ ಪ್ರಕಾರ ಕೆಲಸ ಮಾಡಿ, ಸಿಎಂ ಕಚೇರಿಯಿಂದ ಕರೆ ಬಂದರೂ ಮಣಿಯಬಾರದು. ಹೋಗುವಾಗ ದಾಖಲೆಯ ರಾಶಿ ಇಟ್ಟು ಹೋಗಿ ಎಂದು ಹೇಳಿವುದು ಭವಿಷ್ಯದಲ್ಲಿ ಸ್ವಚ್ಛ ಆಡಳಿತ ನೀಡುವ ಇಂಗಿತದಂತಿದೆ. ಆಡಿದ ಈ ಮಾತನ್ನು ನಡೆಸಿಕೊಡುವ ಹೊಣೆ ಅಧಿಕಾರಿಗಳ ಮೇಲಷ್ಟೇ ಇಲ್ಲ ಸಿಎಂ ಮೇಲೂ ಇದೆ. ಎಲ್ಲ ಸಚಿವರ ಮೇಲೂ ಇದೆ. ಚುನಾವಣೆಗೆ ಮುನ್ನ ಉಳಿದಿರುವ ಎರಡು ವರ್ಷಗಳ ಕಾಲ ತಾವು ನೀಡಬಹುದಾದ ಆಡಳಿತದ ಕುರಿತು ಹೊಸ ಮುಖ್ಯಮಂತ್ರಿ ಕುತೂಹಲ ಸೃಷ್ಟಿಸಿದ್ದಾರೆ. ಸಿದ್ದರಾಮಯ್ಯ ಸರ್ಕಾರ, ಸಮಾಜದಲ್ಲಿ ಸಾಮರಸ್ಯ ಕಾಪಾಡುವ ಉದ್ದೇಶದಿಂದ ''ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ಪ್ರತಿಬಂಧಕ ವಿಧೇಯಕ 2025'' ಮಂಡನೆ ಮಾಡಿದ್ದರೂ ರಾಜ್ಯಪಾಲರು ಅಂಕಿತ ಹಾಕದೇ ಪರಿಶೀಲನೆಗಾಗಿ ರಾಷ್ಟ್ರಪತಿಗಳಿಗೆ ಕಳಿಸಿದ್ದಾರೆ. ಅದಕ್ಕೆ ಅಂಕಿತ ಪಡೆಯುವ ನಿಟ್ಟಿನಲ್ಲಿ ಡಿ ಕೆ ಸರ್ಕಾರ ಪ್ರಯತ್ನ ಮಾಡಬೇಕಿದೆ. ಅಷ್ಟೇ ಅಲ್ಲ ಕೋಮುದ್ವೇಷ ಭಾಷಣಕಾರ ಚಕ್ರವರ್ತಿ ಸೂಲಿಬೆಲೆ, ಕಲ್ಲಡ್ಕ ಪ್ರಭಾಕರ ಭಟ್, ಹಲವು ಕ್ರಿಮಿನಲ್ ಪ್ರಕರಣಗಳ ಆರೋಪಿ ಪುನೀತ್ ಕೆರೆಹಳ್ಳಿ ತರಹದ ಸಮಾಜಘಾತುಕ ಶಕ್ತಿಗಳ ವಿರುದ್ಧದ ಪ್ರಕರಣಗಳಿಗೆ ಕೋರ್ಟ್ ತಡೆ ನೀಡಿದೆ. ಅವುಗಳ ತೆರವಿಗೆ ಸರ್ಕಾರ ಪ್ರಯತ್ನವನ್ನೇ ನಡೆಸಿಲ್ಲ. ಇದು ಕ್ರಿಮಿನಲ್ ಚಟುವಟಿಕೆ ಪುನರಾವರ್ತನೆಗೆ ಪ್ರೋತ್ಸಾಹ ನೀಡಿದಂತಾಗಿದೆ. ಕೋಮುವಾದವನ್ನು ಮಟ್ಟ ಹಾಕದೇ ಈ ನಾಡು ಸರ್ವ ಜನಾಂಗದ ಶಾಂತಿಯ ತೋಟವಾಗಲು ಸಾಧ್ಯವಿಲ್ಲ. ಆರೆಸ್ಸೆಸ್ ಬಗ್ಗೆ ಮೃದು ಧೋರಣೆ ಹೊಂದಿದಂತೆ ಕಂಡು ಬಂದಿರುವ ಡಿಕೆಶಿ, ಕೋಮುವಾದದ ನಿಗ್ರಹಕ್ಕೆ ಪಣ ತೊಡುವರೇ ಎಂಬ ಅನುಮಾನ ಜನರಲ್ಲಿದೆ. ಈ ಅನುಮಾನವನ್ನು ನಿವಾರಿಸುವಂತೆ ಅವರು ನಡೆದುಕೊಳ್ಳಬೇಕಿದೆ.

ಸಿದ್ದರಾಮಯ್ಯ ಅವರು ಅಧಿಕಾರ ಹಸ್ತಾಂತರ ಮಾಡುವಾಗ ತೋರಿದ ಮುತ್ಸದ್ದಿತನ, ಒಂದಿನತೂ ವಿಪಕ್ಷಗಳ ಬಾಯಿಗೆ ಆಹಾರವಾಗದಂತೆ ಇಬ್ಬರೂ ನಡೆದುಕೊಂಡ ರೀತಿ ಅಪರೂಪದ ಮಾದರಿಯಾಗಿದೆ. ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಎಂದು ಹೈಕಮಾಂಡ್ ತೀರ್ಮಾನ ಪ್ರಕಟಿಸುವಾಗಲೂ ಇಬ್ಬರೂ ದೆಹಲಿಯಲ್ಲಿ ಜೊತೆಯಲ್ಲಿಯೇ ಇದ್ದರು. ಬೆಂಗಳೂರಿಗೆ ಬಂದು ತಮ್ಮ ರಾಜೀನಾಮೆ ತೀರ್ಮಾನ ಮಾಡುವ ಪ್ರೆಸ್‌ಮೀಟ್‌ನಲ್ಲೂ, ಲೋಕಭವನಕ್ಕೆ ತೆರಳಿ ರಾಜೀನಾಮೆ ಪತ್ರ ನೀಡುವಾಗಲೂ, ಅನಂತರ ಸಿಎಂ ಗೃಹಕಚೇರಿ ಕೃಷ್ಣದಲ್ಲಿ ನಡೆದ ಪ್ರೆಸ್ ಮೀಟ್‌ನಲ್ಲೂ ಜೊತೆ ಜೊತೆಗೇ ಇದ್ದು ಒಗ್ಗಟ್ಟಿನ ಸಂದೇಶ ರವಾನಿಸಿದ್ದಾರೆ. ಸಿದ್ದರಾಮಯ್ಯ ಅವರ ಪಾದ ಮುಟ್ಟಿ ಆಶೀರ್ವಾದ ಪಡೆದ ಡಿಕೆ ನಡೆ, ಅಧಿಕಾರ ವಹಿಸಿಕೊಂಡ ನಂತರ ಖಾತೆ ಹಂಚಿಕೆಯಲ್ಲೂ ಸಿದ್ದರಾಮಯ್ಯ ಅವರ ಸಲಹೆ ಪಡೆದಿರುವುದು ಡಿಕೆಯವರ ವ್ಯಕ್ತಿತ್ವಕ್ಕೆ ಮತ್ತಷ್ಟು ಮೆರುಗು ತಂದಿದೆ. ಉಪಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲೂ ಇಬ್ಬರೂ ಜೊತೆಯಾಗಿಯೇ ಪ್ರೆಸ್‌ಮೀಟ್ ಮಾಡುತ್ತಿದ್ದರು. ಹೊರಗೆ, ಮಾಧ್ಯಮಗಳಲ್ಲಿ ಕುರ್ಚಿ ಕದನದ ನಿರೂಪಣೆಗಳು ನಡೆಯುತ್ತಿದ್ದಾಗ, ಇಬ್ಬರೂ ವೇದಿಕೆಗಳಲ್ಲಿ ಜೊತೆಯಾಗಿಯೇ ಕಾಣಿಸಿಕೊಳ್ಳುತ್ತಿದ್ದರು. ಡಿಕೆಯವರು ನಮ್ಮ ನಾಯಕ ಸಿದ್ದರಾಮಯ್ಯ ಎಂದು ಪದೇ ಪದೇ ಹೇಳುತ್ತಿದ್ದರು. ಸಿಎಂ ಆಗುವ ತನ್ನ ಆಕಾಂಕ್ಷೆಗೆ ಹೈಕಮಾಂಡ್ ಮಟ್ಟದಲ್ಲಿ ನಿರಂತರ ಪ್ರಯತ್ನ ನಡೆಸುತ್ತಿದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಮುನಿಸು, ಮಾತಿನ ಚಕಮಕಿ ನಡೆಸದೇ ಬಹಳ ಮುತ್ಸದ್ದಿತನದಿಂದ ನಡೆದುಕೊಂಡಿದ್ದಾರೆ. ಈಗ ಅವರ ಕನಸು ನನಸಾಗಿದೆ. ತಮ್ಮ ವರ್ಚಸ್ಸನ್ನು ಬದಲಿಸಿಕೊಳ್ಳುವ ಈ ಕ್ರಿಯೆಯನ್ನು ಅವರು ಜಾರಿಯಲ್ಲಿಟ್ಟು, ಅತ್ಯುತ್ತಮ ಆಡಳಿತ ನೀಡಿ ಮತ್ತೊಂದು ಮಾದರಿಯನ್ನು ಸ್ಥಾಪಿಸಬೇಕು. ಯಶಸ್ವೀ ವ್ಯಾಪಾರೋದ್ಯಮಿ ಎಂದು ಹೆಸರು ಗಳಿಸಿರುವ ಶಿವಕುಮಾರ್ ಅವರು, ತಮ್ಮ ವ್ಯಕ್ತಿಗತ ಹಿತಾಸಕ್ತಿಗಳನ್ನು ರಾಜ್ಯದ ಜನರ ಕಲ್ಯಾಣಕ್ಕಾಗಿ ಪಕ್ಕಕ್ಕೆ ಇರಿಸಬೇಕು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ದೇವೇಗೌಡರ ರಾಜ್ಯಸಭೆ ಹಾದಿಗೆ ಅಡ್ಡಿಯಾಗಿರುವವರು ಯಾರು?

ಪಕ್ಷದ ತಳಮಟ್ಟದ ಸಂಘಟನೆಗಾಗಿ ಕಳೆದ ಹಲವು ದಶಕಗಳಿಂದ ನಿರಂತರವಾಗಿ ದುಡಿಯುತ್ತಿರುವ ಬಿಜೆಪಿಯ ಹತ್ತಾರು ಹಿರಿಯ ನಾಯಕರು ಹಾಗೂ ಅಸಂಖ್ಯಾತ ನಿಷ್ಠಾವಂತ ಕಾರ್ಯಕರ್ತರು ಪ್ರಸ್ತುತ ರಾಜ್ಯಸಭಾ ಸ್ಥಾನದ ನಿರೀಕ್ಷೆಯಲ್ಲಿ ಕಾದುಕುಳಿತಿದ್ದಾರೆ. ತಮ್ಮ ಇಡೀ ರಾಜಕೀಯ ಜೀವನವನ್ನು ಕೇವಲ ಪಕ್ಷಕ್ಕಾಗಿ ಮುಡಿಪಾಗಿಟ್ಟ ನಾಯಕರನ್ನು ಕಡೆಗಣಿಸಿ, ಮೈತ್ರಿ ಪಕ್ಷದ ನಾಯಕರಿಗೆ ಮಣೆ ಹಾಕುವುದು ಎಷ್ಟರ ಮಟ್ಟಿಗೆ ಸರಿ ಎಂಬ ತೀವ್ರ ಅಸಮಾಧಾನವು ಈಗ ಭುಗಿಲೆದ್ದಿದೆ



ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡ ಅವರನ್ನು ಮುಂಬರುವ ಚುನಾವಣೆಯ ಮೂಲಕ ಮರಳಿ ರಾಜ್ಯಸಭೆಗೆ ಕಳುಹಿಸಲು ಬೆಂಬಲ ನೀಡುವ ವಿಚಾರದಲ್ಲಿ ಬಿಜೆಪಿ ಪಾಳಯದಲ್ಲಿ ತೀವ್ರ ಸ್ವರೂಪದ ಸಸ್ಪೆನ್ಸ್ ನಿರಂತರವಾಗಿ ಮುಂದುವರಿದಿದೆ. ಜೆಡಿಎಸ್ ಜೊತೆಗಿನ ಮೈತ್ರಿಯ ಬಲವಾದ ಕಾರಣದಿಂದಾಗಿ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟದ ಹಿರಿಯ ನಾಯಕರಿಗೆ ಬೆಂಬಲ ನೀಡಬೇಕೆಂಬ ಒಲವು ದೆಹಲಿಯ ಮಟ್ಟದಲ್ಲಿ ದಟ್ಟವಾಗಿ ಕೇಳಿಬರುತ್ತಿದ್ದರೂ, ಪಕ್ಷದ ರಾಜ್ಯ ಘಟಕದ ತೀವ್ರ ಮಟ್ಟದ ವಿರೋಧವು ಅಂತಿಮ ನಿರ್ಧಾರವನ್ನು ತೀವ್ರವಾಗಿ ವಿಳಂಬಗೊಳಿಸುವಂತೆ ಮಾಡಿದೆ.

ಲೋಕಸಭಾ ಚುನಾವಣೆಯಲ್ಲಿನ ಮೈತ್ರಿ ಧರ್ಮದ ಪಾಲನೆಯ ಹೆಸರಿನಲ್ಲಿ ಮುಂಬರುವ ರಾಜ್ಯಸಭಾ ಸ್ಥಾನವನ್ನು ಸುಲಭವಾಗಿ ಜೆಡಿಎಸ್ ಪಾಲಿಗೆ ಬಿಟ್ಟುಕೊಡಬಾರದು ಎಂಬುದು ಪ್ರಸ್ತುತ ರಾಜ್ಯ ಬಿಜೆಪಿ ನಾಯಕರ ಅತ್ಯಂತ ಪ್ರಬಲವಾದ ಹಾಗೂ ಸ್ಪಷ್ಟವಾದ ಏಕೈಕ ವಾದವಾಗಿದೆ. ರಾಜ್ಯದಲ್ಲಿ ಬಿಜೆಪಿಯ ಬಳಿ ಇರುವ ಹೆಚ್ಚುವರಿ ಶಾಸಕರ ಮೌಲ್ಯಯುತ ಮತಗಳನ್ನು ಬಳಸಿಕೊಂಡು ಪ್ರಾದೇಶಿಕ ಪಕ್ಷದ ನಾಯಕರನ್ನು ಆಯ್ಕೆ ಮಾಡುವುದು ಪಕ್ಷದ ಭವಿಷ್ಯದ ಹಿತದೃಷ್ಟಿಯಿಂದ ಖಂಡಿತವಾಗಿಯೂ ಸೂಕ್ತವಲ್ಲ ಎಂಬ ದೃಢವಾದ ಅಭಿಪ್ರಾಯ ವ್ಯಕ್ತವಾಗಿದೆ.

ಹಿರಿಯ ನಾಯಕ ದೇವೇಗೌಡರ ಉಮೇದುವಾರಿಕೆಗೆ ಪಕ್ಷದೊಳಗೆ ವ್ಯಾಪಕ ವಿರೋಧ ವ್ಯಕ್ತವಾಗಲು ಅವರ ಪ್ರಸ್ತುತ ಇಳಿವಯಸ್ಸು ಕೂಡ ಒಂದು ಅತ್ಯಂತ ಪ್ರಮುಖ ಕಾರಣವಾಗಿ ಪರಿಣಮಿಸಿದೆ. ಪ್ರಸ್ತುತ 93 ವರ್ಷಗಳ ಗಡಿಯನ್ನು ದಾಟಿರುವ ನಾಯಕನಿಗೆ ಮರಳಿ ಸಂಸತ್ತಿನ ಪ್ರವೇಶ ಒದಗಿಸುವ ನೈಜ ಅಗತ್ಯವಿದೆಯೇ ಎಂಬ ಗಂಭೀರ ಪ್ರಶ್ನೆಗಳು ಈಗ ಹುಟ್ಟಿಕೊಂಡಿವೆ. ಈ ಇಳಿ ವಯಸ್ಸಿನಲ್ಲಿ ಅವರಿಗೆ ಖಂಡಿತಾ ಕೇವಲ ವಿಶ್ರಾಂತಿಯ ಅವಶ್ಯಕತೆಯಿದೆ ವಿನಃ, ಸಕ್ರಿಯ ರಾಜಕಾರಣದ ದೈನಂದಿನ ಜವಾಬ್ದಾರಿಯಲ್ಲ ಎಂಬ ವಾಸ್ತವಿಕ ಮಾತುಗಳು ಸ್ವತಃ ಬಿಜೆಪಿ ಪಾಳಯದಿಂದಲೇ ಬಹಿರಂಗವಾಗಿ ಕೇಳಿಬರುತ್ತಿವೆ.

ಪಕ್ಷದ ತಳಮಟ್ಟದ ಸಂಘಟನೆಗಾಗಿ ಕಳೆದ ಹಲವು ದಶಕಗಳಿಂದ ನಿರಂತರವಾಗಿ ದುಡಿಯುತ್ತಿರುವ ಬಿಜೆಪಿಯ ಹತ್ತಾರು ಹಿರಿಯ ನಾಯಕರು ಹಾಗೂ ಅಸಂಖ್ಯಾತ ನಿಷ್ಠಾವಂತ ಕಾರ್ಯಕರ್ತರು ಪ್ರಸ್ತುತ ರಾಜ್ಯಸಭಾ ಸ್ಥಾನದ ನಿರೀಕ್ಷೆಯಲ್ಲಿ ಕಾದುಕುಳಿತಿದ್ದಾರೆ. ತಮ್ಮ ಇಡೀ ರಾಜಕೀಯ ಜೀವನವನ್ನು ಕೇವಲ ಪಕ್ಷಕ್ಕಾಗಿ ಮುಡಿಪಾಗಿಟ್ಟ ನಾಯಕರನ್ನು ಕಡೆಗಣಿಸಿ, ಮೈತ್ರಿ ಪಕ್ಷದ ನಾಯಕರಿಗೆ ಮಣೆ ಹಾಕುವುದು ಎಷ್ಟರ ಮಟ್ಟಿಗೆ ಸರಿ ಎಂಬ ತೀವ್ರ ಅಸಮಾಧಾನವು ಈಗ ಭುಗಿಲೆದ್ದಿದೆ. ಈ ಅನ್ಯಾಯದ ನಿರ್ಧಾರದಿಂದಾಗಿ ನಿಷ್ಠಾವಂತ ಕಾರ್ಯಕರ್ತರಲ್ಲಿ ತಪ್ಪು ಸಂದೇಶ ರವಾನೆಯಾಗುತ್ತದೆ ಎಂಬುದು ಆತಂಕವಾಗಿದೆ. ರಾಜ್ಯದಲ್ಲಿ ಇರುವ ಒಂದು ಸ್ಥಾನದಲ್ಲಿ ಹೆಚ್ಚು ಸದಸ್ಯರಿರುವ ಪಕ್ಷ ಬಿಟ್ಟುಕೊಟ್ಟರೆ ಕಾರ್ಯಕರ್ತರಿಗೆ ತಪ್ಪು ಸಂದೇಶ ರವಾನೆಯಾಗುತ್ತದೆ ಎಂಬುದು ಕೂಡ ಹಲವು ನಾಯಕರಲ್ಲಿ ವ್ಯಕ್ತವಾಗುತ್ತಿದೆ.

ಸದ್ಯದ ರಾಜ್ಯಸಭಾ ಚುನಾವಣೆಯ ವಾಸ್ತವಿಕ ಲೆಕ್ಕಾಚಾರಗಳನ್ನು ಕೂಲಂಕಷವಾಗಿ ಗಮನಿಸಿದರೆ ಜೆಡಿಎಸ್ ಪಕ್ಷವು ಸ್ವತಂತ್ರವಾಗಿ ತನ್ನ ಅಭ್ಯರ್ಥಿಯನ್ನು ಮೇಲ್ಮನೆಗೆ ಗೆಲ್ಲಿಸುವ ಅಗತ್ಯ ಸಂಖ್ಯಾಬಲವನ್ನು ವಿಧಾನಸಭೆಯಲ್ಲಿ ಹೊಂದಿಲ್ಲ. ಹೀಗಾಗಿ ರಾಷ್ಟ್ರೀಯ ಪಕ್ಷವಾದ ಬಿಜೆಪಿಯ ಶಾಸಕರ ಬೆಂಬಲ ಹಾಗೂ ಅವರ ಹೆಚ್ಚುವರಿ ಮೌಲ್ಯಯುತ ಮತಗಳು ಇಲ್ಲಿ ಅನಿವಾರ್ಯವಾಗಿವೆ. ದೇಶದ ಪ್ರಧಾನಿ ನರೇಂದ್ರ ಮೋದಿ ಅವರು ದೇವೇಗೌಡರ ಬಗ್ಗೆ ಸಹಾನುಭೂತಿ ಹೊಂದಿದ್ದು, ಹೈಕಮಾಂಡ್ ಮಟ್ಟದ ಈ ವಿಶೇಷ ಬಾಂಧವ್ಯವೇ ಅಂತಿಮವಾಗಿ ಪ್ರಾದೇಶಿಕ ಪಕ್ಷಕ್ಕೆ ವರದಾನವಾಗಬಹುದು ಎಂಬ ಬಲವಾದ ನಂಬಿಕೆ ಜೆಡಿಎಸ್ ನಾಯಕರಲ್ಲಿದೆ.

ಆದರೆ, ಕೇವಲ ಪ್ರಾದೇಶಿಕ ಪಕ್ಷದ ಅಸ್ತಿತ್ವ ಉಳಿಸುವ ಭರದಲ್ಲಿ ರಾಷ್ಟ್ರೀಯ ಪಕ್ಷವಾಗಿರುವ ಬಿಜೆಪಿ ತನ್ನ ಸ್ವಂತ ಆಂತರಿಕ ಶಕ್ತಿಯನ್ನು ಕುಗ್ಗಿಸಿಕೊಳ್ಳಬಾರದು ಎಂದು ರಾಜ್ಯದ ಪ್ರಮುಖ ನಾಯಕರು ಹೈಕಮಾಂಡ್‌ಗೆ ಮನವರಿಕೆ ಮಾಡುವ ಸತತ ಪ್ರಯತ್ನ ನಡೆಸಿದ್ದಾರೆ. ಮುಂಬರುವ ದಿನಗಳಲ್ಲಿ ರಾಜ್ಯದಾದ್ಯಂತ ಪಕ್ಷವನ್ನು ತಳಮಟ್ಟದಿಂದ ಬಲಪಡಿಸಲು ನಮ್ಮದೇ ಆದ ಸ್ವಂತ ನಾಯಕರನ್ನು ಬೆಳೆಸುವುದು ಅತ್ಯಗತ್ಯ ಎನ್ನುವ ವಾದವು ಮುನ್ನೆಲೆಗೆ ಬಂದಿದೆ. ಈ ಕಾರಣದಿಂದಾಗಿ, ಅತ್ಯಂತ ಪ್ರಬಲ ರಾಜಕೀಯ ವೇದಿಕೆಯಾಗಿರುವ ರಾಜ್ಯಸಭೆಯನ್ನು ಸುಲಭವಾಗಿ ಮೈತ್ರಿ ಪಾಲುದಾರರಿಗೆ ಸಂಪೂರ್ಣವಾಗಿ ಧಾರೆಯೆರೆಯಬಾರದು ಎನ್ನುವ ವಾಸ್ತವ ನಿಲುವನ್ನು ಮುಂದಿಡಲಾಗಿದೆ.

ರಾಜ್ಯ ಘಟಕದ ಈ ಎಲ್ಲಾ ತಾರ್ಕಿಕ ವಿರೋಧಗಳ ನಡುವೆಯೂ ದೇವೇಗೌಡರ ಅತ್ಯಂತ ಸುದೀರ್ಘವಾದ ರಾಜಕೀಯ ಅನುಭವ, ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಅವರಿಗಿರುವ ಪ್ರಭಾವಶಾಲಿ ವರ್ಚಸ್ಸನ್ನು ನಮ್ಮ ಪಕ್ಷಕ್ಕೆ ಬಳಸಿಕೊಳ್ಳಬಹುದು ಎನ್ನುವ ಮಾತುಗಳು ಕೇಸರಿ ಪಕ್ಷದಲ್ಲಿ ಕೇಳಿಬರುತ್ತಿವೆ. ಓರ್ವ ಮಾಜಿ ಪ್ರಧಾನಿಯಾಗಿ ಹಾಗೂ ಹಿರಿಯ ಮುತ್ಸದ್ದಿಯಾಗಿ ದೇಶದ ಹಿತದೃಷ್ಟಿಯಿಂದ ಅವರು ಸಂಸತ್ತಿನಲ್ಲಿ ಮುಂದುವರಿಯುವುದು ಸೂಕ್ತ ಎಂಬ ಸಮರ್ಥನೆಯೂ ಒಂದು ವರ್ಗದಲ್ಲಿದೆ. ಇದು ಕೇವಲ ಸಾಮಾನ್ಯ ರಾಜಕೀಯ ಲಾಭ-ನಷ್ಟಗಳ ಲೆಕ್ಕಾಚಾರ ಮಾತ್ರವಲ್ಲದೆ, ಹಿರಿಯ ನಾಯಕರೊಬ್ಬರ ಘನತೆಯನ್ನು ಕಾಪಾಡುವ ಸೂಕ್ಷ್ಮ ವಿಚಾರವೂ ಆಗಿದೆ.

ಆದರೆ ದೇವೇಗೌಡರಿಗೆ ಸಂಪೂರ್ಣ ಬೆಂಬಲ ಸೂಚಿಸುವ ಕುರಿತಾದ ಚೆಂಡು ಈಗ ನವದೆಹಲಿಯಲ್ಲಿರುವ ಬಿಜೆಪಿ ಕೇಂದ್ರೀಯ ಸಂಸದೀಯ ಮಂಡಳಿಯ ಅಂಗಳದಲ್ಲಿದೆ. ರಾಜ್ಯ ಘಟಕದ ನಾಯಕರ ತೀವ್ರ ವಿರೋಧ ಹಾಗೂ ತಳಮಟ್ಟದ ಕಾರ್ಯಕರ್ತರ ಅಸಮಾಧಾನವನ್ನು ಯಶಸ್ವಿಯಾಗಿ ಶಮನಗೊಳಿಸಿ ರಾಷ್ಟ್ರೀಯ ವರಿಷ್ಠರು ಮೈತ್ರಿ ಧರ್ಮ ಪಾಲಿಸುತ್ತಾರೆಯೇ ಎಂಬುದು ಪ್ರಶ್ನೆಯಾಗಿದೆ. ಅಥವಾ ಭವಿಷ್ಯದ ದೃಷ್ಟಿಯಿಂದ ಸ್ವಪಕ್ಷೀಯರ ಹಿತಾಸಕ್ತಿಗೆ ಮಣೆ ಹಾಕುತ್ತಾರೆಯೇ ಎಂಬುದನ್ನು ಕಾದು ನೋಡಬೇಕಿದೆ. ರಾಜ್ಯ ರಾಜಕಾರಣದಲ್ಲಿ ತೀವ್ರ ಕುತೂಹಲ ಕೆರಳಿಸಿರುವ ಈ ಮಹತ್ವದ ಸಸ್ಪೆನ್ಸ್ ನಾಟಕವು ಮುಂಬರುವ ಕೆಲವೇ ದಿನಗಳಲ್ಲಿ ನಿರ್ಣಾಯಕ ತಿರುವು ಪಡೆಯುವುದು ಖಚಿತವಾಗಿದೆ.

28 ವರ್ಷಗಳ ಟಿಎಂಸಿ ಸಾಮ್ರಾಜ್ಯ ಕೇವಲ 13 ದಿನಗಳಲ್ಲಿ ಕುಸಿದದ್ದು ಹೇಗೆ?

ಹತ್ತಾರು ವರ್ಷಗಳಿಂದ ಸೋಲರಿಯದ ನಾಯಕಿಯಾಗಿದ್ದ ಅವರು, ತಮ್ಮದೇ ಭದ್ರಕೋಟೆಯಲ್ಲಿ ಜನಾದೇಶ ಕಳೆದುಕೊಳ್ಳಬೇಕಾಯಿತು. ಮೂರು ಬಾರಿ ಮುಖ್ಯಮಂತ್ರಿಯಾಗಿದ್ದವರು ಶಾಸಕತ್ವವನ್ನೂ ಕಳೆದುಕೊಂಡದ್ದು ಕೇವಲ ವೈಯಕ್ತಿಕ ಸೋಲಲ್ಲ, ಅದು ಒಂದು ಕಾಲದ ಬಲಿಷ್ಠ ನಾಯಕತ್ವದ ಮೇಲಿನ ಜನರ ಸಂಪೂರ್ಣ ಭ್ರಮನಿರಸನದ ಸಂಕೇತವಾಗಿದೆ. ಅವರ ವೈಯಕ್ತಿಕ ಸೋಲು ಪಕ್ಷದ ಕಾರ್ಯಕರ್ತರ ನೈತಿಕ ಸ್ಥೈರ್ಯವನ್ನು ಸಂಪೂರ್ಣವಾಗಿ ಕುಗ್ಗಿಸಿದೆ



ಪಶ್ಚಿಮ ಬಂಗಾಳದ ರಾಜಕೀಯ ಇತಿಹಾಸದಲ್ಲಿ ಇದೊಂದು ಅನಿರೀಕ್ಷಿತ ಮತ್ತು ಐತಿಹಾಸಿಕ ಪಲ್ಲಟ. 1998ರಲ್ಲಿ ಸ್ಥಾಪನೆಯಾಗಿ, ಸತತ ಹೋರಾಟಗಳ ಮೂಲಕ ಬೆಳೆದು, ಮೂರು ಬಾರಿ ರಾಜ್ಯದ ಆಡಳಿತದ ಚುಕ್ಕಾಣಿ ಹಿಡಿದಿದ್ದ 28 ವರ್ಷಗಳ ಹಳೆಯ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಪಕ್ಷವು ಅಕ್ಷರಶಃ ಪತನಗೊಂಡಿದೆ. ದಶಕಗಳ ಕಾಲ ಬಂಗಾಳದ ಪ್ರಶ್ನಾತೀತ ನಾಯಕಿಯಾಗಿ ಮೆರೆದಿದ್ದ, ದೀದಿ ಎಂದೇ ಜನಪ್ರಿಯರಾಗಿದ್ದ ಮಮತಾ ಬ್ಯಾನರ್ಜಿ ಅವರು ಇಂದು ಓರ್ವ ಸಾಧಾರಣ ಶಾಸಕಿಯೂ ಅಲ್ಲದ ಸ್ಥಿತಿಗೆ ತಲುಪಿರುವುದು ಪ್ರಜಾಪ್ರಭುತ್ವದ ಅಚ್ಚರಿಯ ಪುಟಗಳಲ್ಲೊಂದು. ಈ ಕುಸಿತ ರಾತ್ರೋರಾತ್ರಿ ಆದದ್ದಲ್ಲವಾದರೂ, ಅದರ ಅಂತಿಮ ರೂಪ ಕೇವಲ 13 ದಿನಗಳ ಹೈಡ್ರಾಮಾದಲ್ಲಿ ಮುಕ್ತಾಯಗೊಂಡಿರುವುದು ರಾಜಕೀಯ ವಲಯದಲ್ಲಿ ತೀವ್ರ ಸಂಚಲನ ಮೂಡಿಸಿದೆ.

ಚುನಾವಣಾ ಪ್ರಕ್ರಿಯೆ ಮತ್ತು ಫಲಿತಾಂಶದ ಆಸುಪಾಸಿನ ಆ ಹದಿಮೂರು ದಿನಗಳು ಟಿಎಂಸಿ ಪಾಲಿಗೆ ಪ್ರಳಯಕಾಲವಾಗಿ ಪರಿಣಮಿಸಿದವು. ಪಕ್ಷದೊಳಗಿನ ಆಂತರಿಕ ಭಿನ್ನಮತ, ಸಾಲುಸಾಲು ನಾಯಕರ ನಿರ್ಗಮನ ಮತ್ತು ಅಂತಿಮವಾಗಿ ಜನರ ಸ್ಪಷ್ಟ ತಿರಸ್ಕಾರ ಒಟ್ಟೊಟ್ಟಿಗೆ ಸ್ಫೋಟಗೊಂಡವು. ಫಲಿತಾಂಶದ ಮುನ್ಸೂಚನೆ ಸಿಗುತ್ತಿದ್ದಂತೆಯೇ ಪಕ್ಷದ ತಳಮಟ್ಟದ ಕಾರ್ಯಕರ್ತರು ಮತ್ತು ದ್ವಿತೀಯ ಹಂತದ ನಾಯಕರು ದಿಕ್ಕುತಪ್ಪಿದರು. ನಾಯಕತ್ವದ ಮೇಲಿನ ವಿಶ್ವಾಸ ಕಳೆದುಕೊಂಡ ಪರಿಣಾಮವಾಗಿ, ಕೇವಲ ಎರಡು ವಾರಗಳಿಗಿಂತ ಕಡಿಮೆ ಅವಧಿಯಲ್ಲಿ, ಬಂಗಾಳದ ಮೂಲೆಮೂಲೆಗಳಲ್ಲಿ ಬೇರೂರಿದ್ದ ಪಕ್ಷದ ಬೃಹತ್ ಸಂಘಟನಾತ್ಮಕ ರಚನೆಯು ಕುಸಿದುಬಿದ್ದಿದೆ.

ಮೂರನೇ ಅವಧಿಯ ಆಡಳಿತವು ಮಮತಾ ಬ್ಯಾನರ್ಜಿ ಅವರ ಪಾಲಿಗೆ ಅತ್ಯಂತ ಕಠಿಣವಾಗಿತ್ತು ಹಾಗೂ ಆಡಳಿತ ವಿರೋಧಿ ಅಲೆಯು ಮಿತಿಮೀರಿತ್ತು. ಶಿಕ್ಷಕರ ನೇಮಕಾತಿ ಹಗರಣ, ಪಡಿತರ ವಿತರಣೆ ಅಕ್ರಮ ಮತ್ತು ಸಂದೇಶಖಾಲಿಯಂತಹ ಸೂಕ್ಷ್ಮ ಘಟನೆಗಳು ಸರ್ಕಾರದ ವರ್ಚಸ್ಸಿಗೆ ಭಾರೀ ಪೆಟ್ಟು ನೀಡಿದ್ದವು. ಈ ಭ್ರಷ್ಟಾಚಾರದ ಆರೋಪಗಳು ಮತ್ತು ಕಾನೂನು ಸುವ್ಯವಸ್ಥೆಯ ಕುಸಿತವು, ದೀದಿ ಅವರನ್ನು ನಿರಂತರವಾಗಿ ಬೆಂಬಲಿಸುತ್ತಿದ್ದ ಗ್ರಾಮೀಣ, ಬಡ ಮತ್ತು ಮಧ್ಯಮ ವರ್ಗದ ಮತದಾರರಲ್ಲಿ ತೀವ್ರ ಆಕ್ರೋಶವನ್ನು ಹುಟ್ಟುಹಾಕಿತ್ತು. ಇದೇ ಆಕ್ರೋಶವು ಅಂತಿಮವಾಗಿ ಮತಗಟ್ಟೆಯಲ್ಲಿ ಟಿಎಂಸಿ ವಿರುದ್ಧದ ಧ್ವನಿಯಾಗಿ ಬದಲಾಯಿತು.

ಪಕ್ಷದ ಆಂತರಿಕ ಕಚ್ಚಾಟಗಳು ಈ ಪತನವನ್ನು ಮತ್ತಷ್ಟು ವೇಗಗೊಳಿಸಿದವು. ಹಿರಿಯ ನಾಯಕರು ಮತ್ತು ಮಮತಾ ಅವರ ಸೋದರಳಿಯ ಅಭಿಷೇಕ್ ಬ್ಯಾನರ್ಜಿ ಬೆಂಬಲಿತ ಯುವ ನಾಯಕರ ನಡುವಿನ ಶೀತಲ ಸಮರವು ತಾರಕಕ್ಕೇರಿತ್ತು. ಟಿಕೆಟ್ ಹಂಚಿಕೆ, ಪ್ರಚಾರದ ಉಸ್ತುವಾರಿ ಮತ್ತು ಪಕ್ಷದ ಮೇಲಿನ ಹಿಡಿತದ ವಿಚಾರದಲ್ಲಿನ ಭಿನ್ನಾಭಿಪ್ರಾಯಗಳು ಪಕ್ಷವನ್ನು ಇಬ್ಭಾಗ ಮಾಡಿದ್ದವು. ಸಂಕಷ್ಟದ ಸಮಯದಲ್ಲಿ ಒಗ್ಗಟ್ಟಾಗಿ ನಿಲ್ಲಬೇಕಿದ್ದ ನಾಯಕರು, ಪರಸ್ಪರ ದೂಷಣೆಯಲ್ಲಿ ತೊಡಗುವ ಮೂಲಕ ಪಕ್ಷದ ಬಲವನ್ನು ಉಡುಗಿಸಿದರು. ಇದು ವಿರೋಧ ಪಕ್ಷಗಳಿಗೆ ಸುಲಭವಾಗಿ ಮೇಲುಗೈ ಸಾಧಿಸಲು ದಾರಿ ಮಾಡಿಕೊಟ್ಟಿತು.

ಅದಲ್ಲದೆ ಪಕ್ಷದ ಈ ದುಸ್ಥಿತಿಗೆ ನಾಯಕತ್ವದ ನಿರ್ಧಾರಗಳೇ ಪ್ರಮುಖ ಕಾರಣ ಎಂದು ಇತ್ತೀಚೆಗೆ ಉಚ್ಚಾಟನೆಗೊಂಡ ಟಿಎಂಸಿ ನಾಯಕ ರಿತಬ್ರತಾ ಬ್ಯಾನರ್ಜಿ ಅವರ ಬಂಡಾಯವು ಸ್ಪಷ್ಟಪಡಿಸುತ್ತದೆ. ತಮ್ಮ ಸೋದರಳಿಯ ಅಭಿಜಿತ್‌ಗಾಗಿ ದಶಕಗಳಿಂದ ಪಕ್ಷಕ್ಕಾಗಿ ನಿರಂತರವಾಗಿ ದುಡಿದಿದ್ದ ತಮ್ಮ ಆಪ್ತರನ್ನೇ ಮಮತಾ ಬ್ಯಾನರ್ಜಿ ಕಡೆಗಣಿಸಿದರು ಎಂಬ ಅಸಮಾಧಾನ ವ್ಯಾಪಕವಾಗಿದೆ. ಇದರ ಪರಿಣಾಮವಾಗಿ, ಇಂದು ರಿತಬ್ರತಾ ನೇತೃತ್ವದ ಬಂಡಾಯ ಬಣವನ್ನು ಬೆಂಬಲಿಸುವ ಶಾಸಕರ ಸಂಖ್ಯೆ ಹೆಚ್ಚಾಗುತ್ತಿದ್ದು, ವಿರೋಧ ಪಕ್ಷಗಳು ಬಲಗೊಳ್ಳುತ್ತಿವೆ. ಸ್ವತಃ ಮಮತಾ ಅವರು ಸ್ವಕ್ಷೇತ್ರ ಭವಾನಿಪುರದಲ್ಲೇ ಸೋಲೊಪ್ಪಿಕೊಳ್ಳುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಕೇವಲ ಸೋದರಳಿಯನ ಏಳಿಗೆಗಾಗಿ ಪಕ್ಷದ ನಿಷ್ಠಾವಂತರನ್ನು ಬಲಿಕೊಟ್ಟಿದ್ದೇ ತಾನು ಕಟ್ಟಿದ್ದ ಸಾಮ್ರಾಜ್ಯ ಅಲುಗಾಡಲು ಮತ್ತು ಹಿರಿಯ ನಾಯಕರು ಪಕ್ಷವನ್ನು ತ್ಯಜಿಸಲು ಪ್ರಮುಖ ಕಾರಣವಾಯಿತು.

ಲಕ್ಷ್ಮೀರ್ ಭಾಂಡಾರ್ ದಂತಹ ಕಲ್ಯಾಣ ಯೋಜನೆಗಳು ಈ ಬಾರಿ ಪಕ್ಷದ ಕೈಹಿಡಿಯಲಿಲ್ಲ. ಮಹಿಳಾ ಮತಬ್ಯಾಂಕ್ ಮತ್ತು ಅಲ್ಪಸಂಖ್ಯಾತರ ನಿರಂತರ ಬೆಂಬಲದ ಮೇಲೆ ಅತಿಯಾದ ವಿಶ್ವಾಸವಿಟ್ಟಿದ್ದ ಟಿಎಂಸಿ, ತಳಮಟ್ಟದಲ್ಲಿ ಬದಲಾಗುತ್ತಿದ್ದ ವಾಸ್ತವವನ್ನು ಗ್ರಹಿಸುವಲ್ಲಿ ವಿಫಲವಾಯಿತು. ವಿರೋಧ ಪಕ್ಷಗಳು ಈ ಬಾರಿ ಅತ್ಯಂತ ವ್ಯವಸ್ಥಿತವಾಗಿ ಆಡಳಿತರೂಢ ಪಕ್ಷದ ವೈಫಲ್ಯಗಳನ್ನು ಜನರ ಮುಂದಿಟ್ಟವು. ಅದಲ್ಲದೆ ಎಸ್‌ಐಆರ್ ನಂತಹ ಕುತಂತ್ರವನ್ನು ಅವರು ಸಂಪೂರ್ಣವಾಗಿ ಬಳಸಿಕೊಂಡರು. ಭ್ರಷ್ಟಾಚಾರ ವಿರೋಧಿ ನಿಲುವಿನ ಪರಿಣಾಮವಾಗಿ ಟಿಎಂಸಿಯ ಶೇಕಡವಾರು ಒಂದಷ್ಟು ಮತಗಳು ಚದುರಿಹೋದವು.

ಬಂಗಾಳದಲ್ಲಿ ಚುನಾವಣಾ ಗೆಲುವಿಗೆ ಬೂತ್ ಮಟ್ಟದ ನಿರ್ವಹಣೆ ಅತ್ಯಂತ ನಿರ್ಣಾಯಕ ಎಂಬುದು ಎಲ್ಲರಿಗೂ ತಿಳಿದ ವಿಚಾರ. ಆದರೆ, ಈ ಬಾರಿ ಟಿಎಂಸಿಯ ಸ್ಥಳೀಯ ನಾಯಕರು ಮತ್ತು ಕಾರ್ಯಕರ್ತರೇ ಭ್ರಷ್ಟಾಚಾರ ಹಾಗೂ ದಬ್ಬಾಳಿಕೆಯ ಆರೋಪಗಳಿಂದಾಗಿ ರಕ್ಷಣಾತ್ಮಕ ಸ್ಥಿತಿಯಲ್ಲಿದ್ದರು. ಆ ನಿರ್ಣಾಯಕ 13 ದಿನಗಳಲ್ಲಿ, ಪಕ್ಷದ ಪರವಾಗಿ ನಿಲ್ಲಬೇಕಿದ್ದ ಅನೇಕ ಮುಖಂಡರು ನಿಷ್ಕ್ರಿಯರಾದರು ಅಥವಾ ಪಕ್ಷಾಂತರ ಮಾಡಿದರು. ಮಮತಾ ಬ್ಯಾನರ್ಜಿ ಅವರ ಏಕಾಂಗಿ ಹೋರಾಟದ ವರ್ಚಸ್ಸು ಈ ಬಾರಿ ತಳಮಟ್ಟದ ಸಂಘಟನೆಯ ಬಿರುಕುಗಳನ್ನು ಮುಚ್ಚಿಹಾಕಲು ವಿಫಲವಾಯಿತು.

ಈ ಪತನದ ಅತಿ ದೊಡ್ಡ ಮತ್ತು ಅನಿರೀಕ್ಷಿತ ಆಘಾತವೆಂದರೆ ಸ್ವತಃ ಮಮತಾ ಬ್ಯಾನರ್ಜಿ ಅವರ ಸೋಲು. ಹತ್ತಾರು ವರ್ಷಗಳಿಂದ ಸೋಲರಿಯದ ನಾಯಕಿಯಾಗಿದ್ದ ಅವರು, ತಮ್ಮದೇ ಭದ್ರಕೋಟೆಯಲ್ಲಿ ಜನಾದೇಶ ಕಳೆದುಕೊಳ್ಳಬೇಕಾಯಿತು. ಮೂರು ಬಾರಿ ಮುಖ್ಯಮಂತ್ರಿಯಾಗಿದ್ದವರು ಶಾಸಕತ್ವವನ್ನೂ ಕಳೆದುಕೊಂಡದ್ದು ಕೇವಲ ವೈಯಕ್ತಿಕ ಸೋಲಲ್ಲ, ಅದು ಒಂದು ಕಾಲದ ಬಲಿಷ್ಠ ನಾಯಕತ್ವದ ಮೇಲಿನ ಜನರ ಸಂಪೂರ್ಣ ಭ್ರಮನಿರಸನದ ಸಂಕೇತವಾಗಿದೆ. ಅವರ ವೈಯಕ್ತಿಕ ಸೋಲು ಪಕ್ಷದ ಕಾರ್ಯಕರ್ತರ ನೈತಿಕ ಸ್ಥೈರ್ಯವನ್ನು ಸಂಪೂರ್ಣವಾಗಿ ಕುಗ್ಗಿಸಿದೆ. ಟಿಎಂಸಿಗೆ ಈಗಾಗಿರುವ ಹಿನ್ನಡೆಯನ್ನು ಹಿಂದೆ ಸರಿಸಿ ಮತ್ತೆ ಪುಟಿದೇಳಲು ಯಾವ ರೀತಿಯ ಸಂಘಟನೆಗಳು ಹಾಗೂ ಕಾರ್ಯತಂತ್ರಗಳನ್ನು ರೂಪಿಸುತ್ತಾರೆ ಎಂಬುದನ್ನು ಕಾದು ನೋಡಬೇಕಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR